

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

MUNJANE VARTHE

EDITOR: H.L.AMARANATH

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

VOLUME : 2 ISSUE: 125 ಸಂಪುಟ: 02 ಸಂಚಿಕೆ: 125 ಪುಟಗಳು: 04 munjanevarthe 18 TUESDAY JUNE 2024 18 ಮಂಗಳವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ 9663122276 www.munjanevarthe.com


ಸತತ 3 ಗಂಟೆ ಸಿಐಡಿ ವಿಚಾರಣೆ ಎದುರಿಸಿದ ಬಿ.ಎಸ್.ಯಡಿಯೂರಪ್ಪ ವಿವರಪುಟ 02

ಫಿಲಿಪ್ಸ್ ಇಂಜಿನಿಯರ್‌ಗಳಿಗಾಗಿ ಕೆಎಂಸಿಯಲ್ಲಿ ತರಬೇತಿ ಕಾರ್ಯಕ್ರಮ ವಿವರಪುಟ 03

ಶಿಕ್ಷಕರ ಸಮಸ್ಯೆಗಳಿಗೆ ಧ್ವನಿಯಾಗುವೆ- ಶಾಸಕ ವಿವೇಕಾನಂದ ವಿವರಪುಟ 04

# ಸರ್ಕಾರ ತೆರಿಗೆ ಹೆಚ್ಚಳದ ಅನಿವಾರ್ಯತೆ

ಪೆಟ್ರೋಲ್–ಡೀಸೆಲ್ ಮೇಲಿನ ತೆರಿಗೆ ಹೆಚ್ಚಳದ ಬಳಿಕವೂ :haratiya Janata Party (BJP) ಆಡಳಿತದ ರಾಜ್ಯಗಳಿಗಿಂತ, ದಕ್ಷಿಣ ಭಾರತದ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ ಇದೆ.

2015 ರ ಬಳಿಕ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಅರ್ಧಕ್ಕರ್ಧ ಕಡಿಮೆ ಆದಾಗಲೂ ಅದರ ಲಾಭವನ್ನು ದೇಶದ ಜನರಿಗೆ ನೀಡದೆ ಮೋದಿ ಸರ್ಕಾರ ಇಂಧನ ಬೆಲೆಯನ್ನು ನಿರಂತರವಾಗಿ ಏರಿಸುತ್ತಾ ಹೋಗಿದೆ.

ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮೌಲ್ಯವರ್ಧಿತ ತೆರಿಗೆ ಹೆಚ್ಚಳದಿಂದ ಸಂಗ್ರಹವಾಗುವ ಅಂದಾಜು ಮೂರು ಸಾವಿರ ಕೋಟಿ ರೂಪಾಯಿಗಳು ರಾಜ್ಯದ ಖಜಾನೆಗೆ ಸಂದಾಯವಾಗುತ್ತದೆ, ಆ ಹಣ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ವಿನಿಯೋಗವಾಗುತ್ತದೆ ಅದು ನಮ್ಮ ಜೇಬಿಗೆ ಹೋಗುವುದಿಲ್ಲ.

ಹಿಂದಿನ BJP Karnataka ಸರ್ಕಾರದಲ್ಲಿ ರಾಜ್ಯದ ಪ್ರತಿಯೊಂದು ಯೋಜನೆಗಳಲ್ಲಿಯೂ 40% ತೆರಿಗೆ ಹಣ ಬಿಜೆಪಿ ನಾಯಕರ ಜೇಬಿಗೆ ಹೋಗುತ್ತಿತ್ತು. ಈ ರೀತಿ ಅಂದಾಜು ಒಂದುವರೆ ಲಕ್ಷ ಕೋಟಿ ರೂಪಾಯಿಗಳಷ್ಟು ರಾಜ್ಯದ ಜನರ ಬೆವರಗಳಿಕೆಯ ತೆರಿಗೆ ಹಣವನ್ನು ಈ ಬಿಜೆಪಿ ನಾಯಕರು ತಮ್ಮ ಜೇಬಿಗೆ ತುಂಬಿಸಿಕೊಂಡಿದ್ದಾರೆ.

ಇಂತಹ ಲೂಟಿಕೋರ, ಭ್ರಷ್ಟ, ಜನವಿರೋಧಿ ಬಿಜೆಪಿ ನಾಯಕರಿಗೆ ಜನಕಲ್ಯಾಣಕ್ಕಾಗಿ ಸ್ವಲ್ಪ ಪ್ರಮಾಣದ ತೆರಿಗೆ ಹೆಚ್ಚಿಸಿದ್ದನ್ನು ಪ್ರಶ್ನಿಸುವ ಅರ್ಹತೆ ಎಲ್ಲಿದೆ?

ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಸರ್ಕಾರ 60 ಸಾವಿರ ಕೋಟಿ ರೂಪಾಯಿಗಳನ್ನು ವ್ಯಯ ಮಾಡುತ್ತಿದೆ. ಇಷ್ಟೂ ಹಣ ರಾಜ್ಯದ ಎಲ್ಲಾ ಜಾತಿ–ಸಮುದಾಯಗಳ ಬಡವರು ಮತ್ತು ಮಧ್ಯಮ ವರ್ಗದವರಿಗೆ ಹೋಗುತ್ತದೆ. ಸದ್ಯದ ಅಲ್ಪ ಪ್ರಮಾಣದ ಡೀಸೆಲ್–ಪೆಟ್ರೋಲ್ ತೆರಿಗೆ ಹೆಚ್ಚಳದಿಂದ ನಮಗೆ ಹೆಚ್ಚುವರಿಯಾಗಿ ಸಂಪನ್ಮೂಲ ಸಂಗ್ರಹ ಆಗುವುದು ಕೇವಲ 3 ಸಾವಿರ ಕೋಟಿ ರೂಪಾಯಿ ಮಾತ್ರ. ಆದರೆ ಗ್ಯಾರಂಟಿಗಳಿಗೆ ನಾವು ಕೊಡುತ್ತಿರುವುದು 60 ಸಾವಿರ ಕೋಟಿ ರೂಪಾಯಿ. ಹೀಗಾಗಿ ವಿಪಕ್ಷ ನಾಯಕ R Ashoka ಅವರ ಮಾತುಗಳಿಗೆ ಅರ್ಥವಿಲ್ಲ. ಆರ್.ಅಶೋಕ್‌ಗೆ ಇದೆಲ್ಲಾ ಅರ್ಥ ಆಗುವುದೂ ಇಲ್ಲ , ಅರ್ಥ ಮಾಡಿಕೊಳ್ಳುವ ಸಾಮರ್ಥ್ಯವೂ ಅವರಲ್ಲಿ ಇಲ್ಲ.





ಶ್ರೀ ಸಿದ್ದಗಂಗಾ ಮಠಕ್ಕೆ ತೆರಳಿ ಪರಮಪೂಜ್ಯ ಜಗದ್ಗುರುಗಳಾದ ಶ್ರೀ ಶ್ರೀ ಶ್ರೀ ಸಿದ್ಧಲಿಂಗ ಮಹಾಸ್ವಾಮೀಜಿಗಳವರ ಆಶೀರ್ವಾದ ಪಡೆದುಕೊಂಡೆ. ಪರಮಪೂಜ್ಯರ ಅನುಗ್ರಹ, ಔದಾರ್ಯಕ್ಕೆ ನಾನು ಚಿರಋಣಿ ಆಗಿದ್ದೇನೆ. ಅನ್ನ, ಆಶ್ರಯ, ಅಕ್ಷರದ ಮೂಲಕ ತ್ರಿವಿಧ ದಾಸೋಹಕ್ಕೆ ಹೆಸರಾದ ಶ್ರೀ ಮಠದಲ್ಲಿ ಅಸಂಖ್ಯಾತ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದು, ಆ ಮಕ್ಕಳನ್ನು ಭೇಟಿಯಾಗಿದ್ದು ಕೂಡ ನನ್ನ ಮನಸ್ಸಿಗೆ ಅತೀವ ಸಂತೋಷ ಉಂಟು ಮಾಡಿದೆ.

# ನಾಲೆಗಳಿಗೆ ನೀರು ಹರಿಸಲು ರೈತ ಸಂಘ ಆಗ್ರಹ

ಮದ್ದೂರು: ಜುಲೈ ಮೊದಲ ವಾರದಲ್ಲಿ ತಾಲೂಕಿನ ಕೊಪ್ಪ ಎನ್‌ಎಸ್‌ಎಲ್ ಸಕ್ಕರೆ ಕಾರ್ಖಾನೆ ಪ್ರಾರಂಭವಾಗುತ್ತಿದ್ದು, ಕಾರ್ಖಾನೆ ಕಬ್ಬು ಸರಬರಾಜು ಮಾಡಬೇಕಾಗಿರುವುದರಿಂದ ಕೆ.ಆರ್.ಎಸ್ ಅಣೆಕಟ್ಟೆಯಿಂದ ವಿಶ್ವೇಶ್ವರಯ್ಯ ನಾಲೆಗಳಿಗೆ ನೀರು ಹರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಹಿರಿಯ ಮುಖಂಡ ಕೀಳಘಟ್ಟ ನಂಜುಂಡಯ್ಯ ಅವರು ಒತ್ತಾಯಿಸಿದರು.



ತಾಲೂಕಿನ ಕೊಪ್ಪ ಗ್ರಾಮದ ಯಂಬಾರ್ಜಿಯರ್ ಮಠದ ಆವರಣದಲ್ಲಿ ಭಾನುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೆ.ಆರ್.ಎಸ್ ಅಣೆಕಟ್ಟೆಯಿಂದ ವಿಶ್ವೇಶ್ವರಯ್ಯ ನಾಲೆಗಳಿಗೆ ನೀರು ಹರಿಸದ ಪರಿಣಾಮ ರೈತರು ಬೆಳೆದಿರುವ ಕಬ್ಬು ಸೇರಿದಂತೆ ಇನ್ನಿತರ ಬೆಳೆಗಳು ಒಣಗುತ್ತಿದ್ದು, ಈಗ ನೀರು ಬಿಡದಿದ್ದರೆ ಕೈಗೆ ಬಂದ ತುತ್ತು ಬಾಯಿಗೆ ಬರುವುದಿಲ್ಲ ಎಂಬಾಂತಾಗುತ್ತದೆ ಎಂದರು. ಬರಗಾಲದಿಂದ ನೊಂದಿರುವ ರೈತರಿಗೆ ಗಾಯದ ಮೇಲೆ ಬರೆ ಎಳೆಯುವುದನ್ನು ಬಿಟ್ಟು ಸರ್ಕಾರ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹಾಗೂ ಜಿಲ್ಲೆಯ ಶಾಸಕರು ವಿಶ್ವೇಶ್ವರಯ್ಯ ನಾಲೆಗಳಿಗೆ ನೀರು ಹರಿಸಲು ಅಗತ್ಯ ಕ್ರಮ ವಹಿಸುವ ಮೂಲಕ ರೈತರ ಹಿತ ಕಾಪಾಡಬೇಕು ಎಂದು ಆಗ್ರಹಿಸಿದರು. ಮುಖಂಡರಾದ ಅರಗಿನಮೇಳೆ ರಾಮೇಗೌಡ, ಹುರುಗಲವಾಡಿ ಉಮೇಶ್, ಕುಮಾರ್, ಜಗದೀಶ್, ಚನ್ನೇಗೌಡ ಇದ್ದರು.



## ಎಲ್ಲಾ ಮುಸಲ್ಮಾನ ಬಾಂಧವರಿಗೆ ಬಕ್ರೀದ್ ಶುಭಾಶಯಗಳು ಮುಖ್ಯಮಂತ್ರಿ ಸಿದ್ದರಾಮಯ್ಯ

ಭಾರತ ಬಹುತ್ವದ ದೇಶ. ಎಲ್ಲಾ ಧರ್ಮ, ಜಾತಿ, ಭಾಷೆ, ಪ್ರಾಂತ್ರ್ಯದವರು ಒಟ್ಟಾಗಿ ಬಾಳಬೇಕು. ಮನುಷ್ಯತ್ವ ಬಹಳ ದೊಡ್ಡದು. ಎಲ್ಲರೂ ಪರಸ್ಪರ ಪ್ರೀತಿಸಬೇಕು. ಪ್ರತಿಯೊಬ್ಬರೂ ಸಹಿಷ್ಣುತೆಯನ್ನು ಪಾಲಿಸಬೇಕು. ಇನ್ನೊಂದು ಧರ್ಮವನ್ನು ಪ್ರೀತಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಹಾಗೆ ಬೆಳೆದಾಗ ಮಾತ್ರ ರಾಷ್ಟ್ರ ಸಮಾಜ ಹಾಗೂ ಎಲ್ಲಾ ಧರ್ಮಗಳೂ ಏಳಿಗೆಯಾಗುತ್ತವೆ.

# ಗ್ಯಾರಂಟಿ ಯೋಜನೆಗಳಿಗೆ ತೈಲಬೆಲೆ ಹೆಚ್ಚಳ ವಿಜಯೇಂದ್ರ

ಹಾಸನ : ಸರ್ಕಾರ ರಾಜ್ಯದ ಜನರಿಗೆ ಗ್ಯಾರಂಟಿ ಯೋಜನೆಗಳನ್ನು ನೀಡಿದೆ. ಅದಕ್ಕೆ ಹಣ ಹೊಂದಿಸಲು ಸಾಧ್ಯವಾಗದೆ ಈ ರೀತಿ ಜನರಿಂದಲೇ ವಸೂಲಿ ಮಾಡುವಂತಹ ಕಾರ್ಯಕ್ಕೆ ಕೈ ಹಾಕಿ ತೈಲ ಬೆಲೆ ಹೆಚ್ಚು ಮಾಡಿರುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ, ಬಿವೈ ವಿಜಯೇಂದ್ರ ಆರೋಪಿಸಿದ್ದಾರೆ.



ಹಾಸನದಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಬಳಿಕ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಜನ ಹಿಡಿಶಾಪ ಹಾಕುತ್ತಿದ್ದಾರೆ. ಬರಗಾಲದಿಂದ ಈಗಷ್ಟೇ ಚೇತರಿಸಿಕೊಳ್ಳುತ್ತಿರುವ ಜನರಿಗೆ ಪೆಟ್ರೋಲ್ ಮತ್ತು ಡಿಸೇಲ್ ದರದಿಂದ ಸರಕು ಸಾಗಾಣಿಕೆ ಮೇಲೆ ಹೊರೆ ಬೀಳಲಿದೆ. ಇದರಿಂದ ದಿನನಿತ್ಯದ ತರಕಾರಿ ಬೆಲೆಯಿಂದ ಹಿಡಿದು ಪ್ರತಿ ವಸ್ತುಗಳ ಮೇಲೆ ಆರ್ಥಿಕ ಹೊರೆಯಾಗಲಿದೆ. ಚುನಾವಣೆ ಬಳಿಕ ಕಾಂಗ್ರೆಸ್ ಪಕ್ಷ ಹತಾಶವಾಗಿದೆ. ಬೇಜವಾಬ್ದಾರಿತನದಿಂದ ಸರ್ಕಾರ ನಡೆಸುತ್ತಿದೆ. ಏಕಾಏಕಿ ತೈಲ ಬೆಲೆ ಏರಿಕೆ ಮಾಡುವ ಮೂಲಕ ಜನರನ್ನ ಆರ್ಥಿಕ ಸಂಕಷ್ಟಕ್ಕೆ ಸಿಲುಕಿಸಿದೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ ವಿಜಯೇಂದ್ರ ವಾಗ್ದಾಳಿ ನಡೆಸಿದರು. ಕೇವಲ ನಗರ ಪ್ರದೇಶಗಳಿಗೆ ಮಾತ್ರ ಸೀಮಿತವಾಗದೆ, ರೈತಾಪಿ ವರ್ಗದವರಿಗೂ ಬೆಲೆ ಏರಿಕೆ ಬಿಸಿ ತಟ್ಟಲಿದೆ. ಇಂದು ರಾಜ್ಯಾದ ಪ್ರತಿ ಜಿಲ್ಲೆಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ವಿರುದ್ಧ ಹಾಗೂ ಕಾಂಗ್ರೆಸ್ ಪಕ್ಷದ ಬೇಜವಾಬ್ದಾರಿತನದ ವಿರುದ್ಧ ಪಕ್ಷ ಹೋರಾಟಕ್ಕಿಳಿಯಲಿದೆ ಎಂದು ಹೇಳಿದ್ದಾರೆ.

ಜನರಿಗೆ ನೀಡಿದ ಗ್ಯಾರಂಟಿಗಳನ್ನು ಈಡೇರಿಸುವುದಕ್ಕಾಗಿ ಕಾಂಗ್ರೆಸ್ ಸರ್ಕಾರ ಪೆಟ್ರೋಲ್–ಡಿಸೇಲ್ ಸೇರಿದಂತೆ ದಿನಬಳಕೆ ವಸ್ತುಗಳ ಬೆಲೆ ಏರಿಕೆ ಮೂಲಕ ಜನಸಾಮಾನ್ಯರ ಮೇಲೆ ಬರೆ ಹಾಕುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ರಾಜ್ಯಾಧ್ಯಕ್ಷರಾದ ಶ್ರೀ ವಿಜಯೇಂದ್ರ ಯಡಿಯೂರಪ್ಪ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಸಂದರ್ಭದಲ್ಲಿ ಪ್ರತಿಪಕ್ಷ ನಾಯಕರಾದ ಶ್ರೀ ಆರ್.ಅಶೋಕ್, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಪಿ.ರಾಜೀವ್, ಮಾಜಿ ಸಚಿವರಾದ ಡಾ. ಅಶ್ವತ್ಥ್ ನಾರಾಯಣ್, ಶ್ರೀ ಬೈರತಿ ಬಸವರಾಜ್, ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ.ಟಿ.ರವಿ, ಶ್ರೀ ಎನ್.ರವಿಕುಮಾರ್, ಶ್ರೀ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರುಗಳು, ಮಾಜಿ ಶಾಸಕರು ಮತ್ತು ಪ್ರಮುಖರು ಉಪಸ್ಥಿತರಿದ್ದರು.




# ಬಗೆದಷ್ಟು ಬಯಲಾಗುತ್ತಿದೆ ದರ್ಶನ್ ಕರಾಳಮುಖ...

ಬೆಂಗಳೂರು:– ಚಾಲೆಂಜಿಂಗ್ ಸ್ಟಾರ್ ದರ್ಶನ್ ಕೋಟಿಕೋಟಿ ಒಡೆಯ ಆದ್ರೂ ತಮ್ಮನಿಗೆ ಸಹಕಾರ ಇಲ್ಲ. ತಾಯಿ ಮೇಲೂ ಹಲ್ಲೆ ಮಾಡಿದ್ದಾರೆ ಅಂತೆ ದಾಸ. ದರ್ಶನ್ ಕರಾಳಮುಖದ ಸತ್ಯ ನಿಮ್ಮ ಮುಂದೆ ಬಗೆದಷ್ಟು ಬಯಲಾಗುತ್ತಿದೆ ದರ್ಶನ್ ಕರಾಳಮುಖ.

ದರ್ಶನ್ ಕೋಟಿ ಕೋಟಿ ಆಸ್ತಿ ಒಡೆಯ ಆಗಿದ್ರೂ ತಮ್ಮ ಇವತ್ತಿಗೂ ಬಾಡಿಗೆ ಮನೆಯಲ್ಲೇ ಇರೋದು ಗೊತ್ತಾಗಿದೆ. ಈ ಬಗ್ಗೆ ದಿನಕರ್ ಮಾತಾಡಿರೋ ವಿಡಿಯೋ ವೈರಲ್ ಆಗಿದೆ. ಜೊತೆಗೆ ದರ್ಶನ್ ತಾಯಿ ಮೀನಾ ಮೇಲೂ ಹಲ್ಲೆ ಮಾಡಿದ್ದಾರೆ. ಇದ್ರಿಂದ ಮಗನ ಜೊತೆ ಸಂಪರ್ಕದಲ್ಲಿ ತಾಯಿ ಇಲ್ಲ ಅಂತ ಕೂಡ ಹೇಳಲಾಗುತ್ತಿದೆ. ತೂಗದೀಪ ಶ್ರೀನಿವಾಸ್ ಅವರಿಗೆ ಮಕ್ಕಳು ಸಿನಿಮಾಗೆ ಹೋಗೋದು ಇಷ್ಟ ಇರಲಿಲ್ಲವಂತೆ. ಕಾರಣ ಕಷ್ಟಪಟ್ಟು ಮಾಡಿದ ಹೆಸರು ಹಾಳು ಮಾಡುತ್ತಾರೆ ಅನ್ನೋ ಭಯ ದರ್ಶನ್ ತಂದೆಗೆ ಇತ್ತು ಅನ್ನೋ ದಿನಕರ್ ಮಾತಿನ ವಿಡಿಯೋ ಕೂಡ ವೈರಲ್ ಆಗುತ್ತಿದೆ.


ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...
www.munjanevarthe.com
ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಮಂಗಳವಾರ 18 ಜೂನ್ 2024
TUESDAY 18 June 2024

# ಸತತ 3 ಗಂಟೆ ಸಿಐಡಿ ವಿಚಾರಣೆ ಎದುರಿಸಿದ ಬಿ.ಎಸ್.ಯಡಿಯೂರಪ್ಪ



ಬೆಂಗಳೂರು: ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ದಾಖಲಾಗಿದ್ದ ಪೋಕ್ಸೋ ಕೇಸ್‌ಗೆ ಸಂಬಂಧಿಸಿದಂತೆ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಅವರಿಂದು ಸಿಐಡಿ ವಿಚಾರಣೆ ಎದುರಿಸಿದ್ದಾರೆ. ಬೆಂಗಳೂರಿನ ಸಿಐಡಿ ಕಚೇರಿಯಲ್ಲಿಂದು ಸತತ 3 ಗಂಟೆ ವಿಚಾರಣೆ ಎದುರಿಸಿದ್ದಾರೆ. ಪ್ರಕರಣದ ತನಿಖಾಧಿಕಾರಿ ಡಿವೈಎಸ್‌ಪಿ ಪುನೀತ್ ವಿಚಾರಣೆ ನಡೆಸಿದ್ದು, ಹಲವು ವಿಷಯಗಳ ಕುರಿತು ಮಾಹಿತಿ ಪಡೆದುಕೊಂಡಿದ್ದಾರೆ. ವಿಚಾರಣೆ ಮುಗಿದ ಬಳಿಕ ಬಿಎಸ್‌ವೈ ಸಿಐಡಿ ಕಚೇರಿಯಿಂದ ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ತಮ್ಮ ದವಳಗಿರಿ ನಿವಾಸಕ್ಕೆ ವಾಪಸ್ ಆಗಿದ್ದಾರೆ.

ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಬಿಎಸ್ ಯಡಿಯೂರಪ್ಪ ಅವರ ಮೇಲಿತ್ತು. ಸಿಐಡಿ ಈ ಬಗ್ಗೆ ತನಿಖೆ ನಡೆಸುತ್ತಿತ್ತು. ಹಲವು ಬಾರಿ ನೋಟಿಸ್ ನೀಡಿದರು ಆರೋಪಿ ಹಾಜರಾಗುತ್ತಿಲ್ಲವೆಂದು ಸಿಐಡಿ ಕೋರ್ಟ್ ಮೊರೆ ಹೋಗಿತ್ತು. ಗುರುವಾರ ಬೆಂಗಳೂರು ವಿಶೇಷ ನ್ಯಾಯಾಲಯವು ಬಂಧನಕ್ಕೆ ವಾರೆಂಟ್ ಜಾರಿ ಮಾಡಲು ಆದೇಶಿಸಿತ್ತು. ಆದರೆ, ಶುಕ್ರವಾರ ಹೈಕೋರ್ಟ್‌ನಲ್ಲಿ ಬಂಧನ ಮಾಡದಂತೆ ಬಿಎಸ್ ಯಡಿಯೂರಪ್ಪ ಅರ್ಜಿ ಸಲ್ಲಿಸಿದ್ದರು. ಸದ್ಯ ವಿಚಾರಣೆ ನಡೆಸಿದ ಹೈಕೋರ್ಟ್, ಬಂಧನ ಮಾಡದಂತೆ ಹಾಗೂ ಜೂನ್ 17ಕ್ಕೆ ತಪ್ಪದೆ ತನಿಖೆಗೆ ಹಾಜರಾಗುವಂತೆ ಸೂಚನೆ ನೀಡಿತ್ತು.

ಯಡಿಯೂರಪ್ಪ ಮಾತ್ರವಲ್ಲದೇ ಮೈಸೂರು ಜಿಲ್ಲೆ ಕೆ.ಆರ್?.ನಗರ ಮಹಿಳೆ ಅಪಹರಣ ಪ್ರಕರಣ ಇಂದೇ ಮಾಜಿ ಸಚಿವ ಎಚ್.ಡಿ.ರೇವಣ್ಣ ಸಹ ಸಿಐಡಿ ಕಚೇರಿಗೆ ವಿಚಾರಣೆಗೆ ಹಾಜರಾಗಿದ್ದರು. ಪೆನ್‌ಡ್ರೈವ್ ಕೇಸ್‌ನಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಎಸ್‌ಐಟಿ ವಶದಲ್ಲಿದ್ದಾರೆ. ಹೀಗಾಗಿ ಇಂದು ಸಿಐಡಿ ಕಚೇರಿಯಲ್ಲಿ ಮಾಜಿ ಸಿಎಂ, ಮಾಜಿ ಸಚಿವ, ಮಾಜಿ ಸಂಸದರ ವಿಚಾರಣೆ ನಡೆಯಿತು.

ಏನಿದು ಕೇಸ್?

ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಕಳೆದ ಮಾರ್ಚ್ 14ರಂದು ನೀಡಲಾಗಿದ್ದ ದೂರಿನ ಅನ್ವಯ ಪೋಕ್ಸೋ ಪ್ರಕರಣ ದಾಖಲಿಸಲಾಗಿತ್ತು. ಕಳೆದ ಫೆಬ್ರವರಿಯಲ್ಲಿ ದೌರ್ಜನ್ಯ ಎಸಗಿದ ಆರೋಪ ಕೇಳಿಬಂದಿತ್ತು. ಈ ಸಂಬಂಧ ಸಂತ್ರಸ್ತೆಯ ತಾಯಿ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಮಾಜಿ ಸಿಎಂ ವಿರುದ್ಧ ಪೋಕ್ಸೊ ಮತ್ತು 354 (ಎ) ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಬಂಧಿಸುವಂತೆ ನಿರ್ದೇಶನ ಕೋರಿ ಪೋಕ್ಸೋ ಕೇಸ್ ಸಂತ್ರಸ್ತೆಯ ಸಹೋದರ ನಿನ್ನೆ(ಜೂ.12) ಹೈಕೋರ್ಟ್‌ಗೆ ರಿಟ್? ಅರ್ಜಿ ಸಲ್ಲಿಸಿದ್ದರು. ಘಟನೆ ನಡೆದು ಹಲವು ತಿಂಗಳಾದರೂ ಪೊಲೀಸರಿಂದ ಕ್ರಮವಿಲ್ಲ. ಯಡಿಯೂರಪ್ಪರನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿಲ್ಲ.

ಅವರ ಮನೆಯ ಸಿಸಿಟಿವಿ ದೃಶ್ಯಾವಳಿ ಸೀಜ್ ಮಾಡಿಲ್ಲ. ಕನಿಷ್ಠ 41ಎ ಅಡಿ ನೋಟಿಸ್ ನೀಡಿ ಅವರನ್ನು ವಿಚಾರಣೆಗೆ ಕರೆದಿಲ್ಲ.ಈ ಮಧ್ಯೆ ದೂರು ನೀಡಿದ ಸಂತ್ರಸ್ತೆಯ ತಾಯಿ ಮೃತಪಟ್ಟಿದ್ದಾರೆ. ಲೈಂಗಿಕ ದೌರ್ಜನ್ಯ ನಡೆದು ಹಲವು ತಿಂಗಳಾದರೂ ಸಂತ್ರಸ್ತೆಗೆ ನ್ಯಾಯ ಸಿಕ್ಕಿಲ್ಲ. ಹೀಗಾಗಿ ಯಡಿಯೂರಪ್ಪರನ್ನು ಬಂಧಿಸುವಂತೆ ನಿರ್ದೇಶಿಸಲು ಮನವಿ ಮಾಡಿದ್ದರು.

# ಸಾಗರದಲ್ಲಿ ಶಾರದಾಂಬಾ ದೇವಸ್ಥಾನದಲ್ಲಿ ಅಷ್ಟಬಂಧ ಕಾರ್ಯಕ್ರಮ

ಪಟ್ಟಣದ ಶಾರದಾಂಬಾ ದೇವಸ್ಥಾನದಲ್ಲಿ ಜೂ. 23 ಮತ್ತು 24ರಂದು ಪುನರ್ ಅಷ್ಟಬಂಧ, ಕುಂಭಾಭಿಷೇಕ, ಸಹಸ್ರ ಮೋದಕ ಗಣಹವನಗಳು ನಡೆಯಲಿದ್ದು, ಶೃಂಗೇರಿಯ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ನೇತೃತ್ವ ವಹಿಸಲಿದ್ದಾರೆ ಎಂದು ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಕೆ.ವಿ.ಜಯರಾಮ್ ತಿಳಿಸಿದರು. ಅವರು ಸಾಗರದಲ್ಲಿ ಸುದ್ದಿ ಗೋಷ್ಠಿ ನಡೆಸಿ ಮಾತನಾಡಿದ ಅವರು, ಜೂ. 23ರ ಸಂಜೆ 5.30ಕ್ಕೆ ಪಟ್ಟಣದ ಶಿವಪ್ಪನಾಯಕ ವೃತ್ತದಿಂದ ಅಶೋಕ ರಸ್ತೆ ಮೂಲಕ ಪುಷ್ಪಾಲಂಕಾರ ರಥದಲ್ಲಿ ಶ್ರೀಗಳ ಶೋಭಾಯಾತ್ರೆ ನಡೆಯಲಿದ್ದು, ಹತ್ತಾರು ಕಲಾತಂಡಗಳು, ವಿವಿಧ ಸಮಾಜದ ಗಣ್ಯರು ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಶ್ರೀಗಳಿಂದ ದೇವಸ್ಥಾನದಲ್ಲಿ ವಿಶೇಷ ಪೂಜೆ ನಡೆಯಲಿದೆ. ಜೂ. 24ರಂದು ಬೆಳಿಗ್ಗೆ 10ರಿಂದ 11ರ ಶುಭಾಂಶದಲ್ಲಿ ನಡೆಯಲಿರುವ ಅಮ್ಮನವರ ಪುನಃ ಪ್ರತಿಷ್ಠಾಪನೆ, ಕುಂಭಾಭಿಷೇಕ, ಸಹಸ್ರ ಮೋದಕ ಗಣಹವನ, ತತ್ವಕಲಾಭಿವೃದ್ಧಿ ಹೋಮ, ಮೂಲಮಂತ್ರ ಹವನದ ಸಾನಿಧ್ಯ ವಹಿಸುವುದಲ್ಲದೆ, ಪ್ರಸಾದ ಕೊಠಡಿ, ಅರ್ಚಕರ ನಿವಾಸ, ಆಡಳಿತ ಕಚೇರಿ ಹಾಗೂ ಶ್ರೀ ಶಾರದಾಂಬಾ ವಾಣಿಜ್ಯ ಸಂಕೀರ್ಣವನ್ನು ಶ್ರೀಗಳು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಹೇಳಿದರು.



ಆಡಳಿತ ಮಂಡಳಿ ಅಧ್ಯಕ್ಷ ಕೆ.ವಿ.ಜಯರಾಮ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಶೃಂಗೇರಿ ಮಠದ ಆಡಳಿತಾಧಿಕಾರಿ ಪಿ.ಎ.ಮುರಳಿ, ಚಾರೋಡಿ ಮೇಸ್ತ ಸಮಾಜದ ರಾಜ್ಯಾಧ್ಯಕ್ಷ ರಾಮಚಂದ್ರ ಬಿ. ಶಿರೂರ್ಕರ್, ಶಾಸಕ ಗೋಪಾಲಕೃಷ್ಣ ಬೇಳೂರು, ಲಕ್ಷ್ಮಣ್ ಜಾಯ್ ಮೇಸ್ತ ಮೊದಲಾದ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ದೇವಸ್ಥಾನಕ್ಕೆ 1962ರಲ್ಲಿ ಶೃಂಗೇರಿಯ ಅಂದಿನ ಜಗದ್ಗುರುಗಳಾಗಿದ್ದ ಅಭಿನವ ತೀರ್ಥರು ಮೊದಲ ಬಾರಿಗೆ ಭೇಟಿ ನೀಡಿದ್ದರು. ಬಳಿಕ ಈತನಕದ ಎಲ್ಲ ಶ್ರೀಗಳು ಶಾರದಾಂಬಾ ದೇವಸ್ಥಾನಕ್ಕೆ ಭೇಟಿ ನೀಡಿ, ಸಮಾಜಕ್ಕೆ ಸೂಕ್ತ ಮಾರ್ಗದರ್ಶನ ನೀಡುತ್ತಿದ್ದಾರೆ ಎಂದು ತಿಳಿಸಿದರು. ಸಾಗರದ ಎಲ್ಲಾ ಭಕ್ತರು ಆಗಮಸಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಿಕೊಡುವಂತೆ ಮನವಿ ಮಾಡಿದರು. ಗೋಷ್ಠಿಯಲ್ಲಿ ವಿ.ಚಂದ್ರಶೇಖರ್, ವಿ. ರಾಘವೇಂದ್ರ, ಜಿ. ಚಂದ್ರಶೇಖರ್, ಕೃಷ್ಣಮೂರ್ತಿ ವಾಮನಾಚಾರ್, ಕೆ. ಹರೀಶ್, ದಿವಾಕರ್, ಮೊದಲಾದವರಿದ್ದರು...

# ಭೀಮ ಚೇತನ ಯುವಕರ ಸಂಘವನ್ನು ಉದ್ಘಾಟಿಸಿದ ಶಾಸಕ ಎ.ಆರ್.ಕೃಷ್ಣಮೂರ್ತಿ

ಯಳಂದೂರು ತಾಲ್ಲೂಕಿನ ಅಲ್ಕೆರೆ ಅಗ್ರಹಾರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಭೀಮ ಚೇತನ ಯುವಕರ ಸಂಘ ಹಾಗೂ ಡಾ. ಬಿಆರ್ ಅಂಬೇಡ್ಕರ್ ನಾಮಫಲಕ ಅನಾವರಣ ಕಾರ್ಯಕ್ರಮ ಹಾಗೂ ಡಾಕ್ಟರ್ ಬಿ ಆರ್ ಅಂಬೇಡ್ಕರ್ ರವರ 133ನೇ ಜಯಂತಿ



ಕಾರ್ಯಕ್ರಮವನ್ನು ಜ್ಞಾನ ಪ್ರಕಾಶ್ ಸ್ವಾಮಿಜಿರವರ ದಿವ್ಯ ಸಾನಿಧ್ಯದಲ್ಲಿ ಉದ್ಘಾಟನೆ ಮಾಡಲಾಯಿತು ಎ ಆರ್ ಕೃಷ್ಣಮೂರ್ತಿ ರವರ ಅಧ್ಯಕ್ಷತೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರ್ವ ಜನಾಂಗದ ಸಮ್ಮುಖದಲ್ಲಿ ಆಚರಿಸಲಾಯಿತು, ನಮ್ಮ ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಸದಸ್ಯರುಗಳು ಹಾಗೂ ಹಂಪೆ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊಫೆಸರ್ ಡಾಕ್ಟರ್ ಪಿ ಮಹದೇವಯ್ಯ. ಜಿಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಗುರುಲಿಂಗಯ್ಯ. ಮಧು ಕುಮಾರ್.ಗ್ರಾಮದ ಯಜಮಾನರು ವಿವಿಧ ಇಲಾಖೆಗಳ ನೌಕರರು ಗ್ರಾಮದ ಭೀಮ ಚೇತನ ಯುವಕರ ಸಂಘದ ಅಧ್ಯಕ್ಷರು ಪದಾಧಿಕಾರಿಗಳು ಮಹಿಳೆಯರು ಯುವಕ ಯುವತಿಯರು ಗ್ರಾಮಸ್ಥರು ಜೊತೆಗೂಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಕಾಲರಾ ಪ್ರಕರಣ ಪತ್ತೆ

ಮಧುಗಿರಿ:- ತಾಲೂಕಿನ ಮಿಡಿಗೇಶಿ ಹೋಬಳಿಯ ಚಿನ್ನೇನಹಳ್ಳಿಯಲ್ಲಿ ಕಾಲರಾ ಪ್ರಕರಣ ಪತ್ತೆಯಾಗಿದ್ದು.

ಕಲುಷಿತ ನೀರು ಸೇವನೆಯಿಂದ ಊರಿನ 200ಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿದ್ದರು. ಇದೇ ಕಾರಣಕ್ಕೆ ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದ ಕೃಷ್ಣಪ್ಪ (32) ಎಂಬುವವರಿಗೆ ಕಾಲರಾ ದೃಢಪಟ್ಟಿದ್ದು, ಇದರಿಂದ ಗ್ರಾಮಸ್ಥರಲ್ಲಿ ಆತಂಕ ಮೂಡಿದೆ. ಚಿನ್ನೇನಹಳ್ಳಿಯಲ್ಲಿ ಕಳೆದ ಭಾನುವಾರದಿಂದ ಹಲವು ಗ್ರಾಮಸ್ಥರಲ್ಲಿ ವಾಂತಿ-ಭೇದಿ ಕಾಣಿಸಿಕೊಂಡಿದ್ದರಿಂದ 200ಕ್ಕೂ ಹೆಚ್ಚು ಮಂದಿ ಆಸ್ಪತ್ರೆಗೆ ದಾಖಲಾಗಿದ್ದರು. ಈ ನಡುವೆ ಚಿಕಿತ್ಸೆ ಫಲಕಾರಿಯಾಗದೇ ಇಬ್ಬರು ಸಾವನ್ನಪ್ಪಿದ್ದರು. ಅಸ್ವಸ್ಥಗೊಂಡ 100ಕ್ಕೂ ಹೆಚ್ಚು ಜನರು ಆಸ್ಪತ್ರೆಗೆ ದಾಖಲಾಗಿದ್ದರು. ಕೆಲವರು ಗುಣಮುಖರಾಗಿದ್ದರೆ, ಇನ್ನು ಕೆಲವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ.



ಕಲುಷಿತ ನೀರು ಸೇವನೆಯಿಂದ ಗ್ರಾಮಸ್ಥರು ಅಸ್ವಸ್ಥಗೊಂಡ ಹಿನ್ನೆಲೆಯಲ್ಲಿ ಚಿನ್ನೇನಹಳ್ಳಿ ಗ್ರಾಮಕ್ಕೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಭೇಟಿ ನೀಡಿ ಮಾಹಿತಿ ಪಡೆದಿದ್ದರು. ಈ ವೇಳೆ ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿಲ್ಲಾ ಪಂಚಾಯತ್ ಸಿಇಓ ಪ್ರಭು, ಡಿಎಚ್‌ಓ ಡಾ.ಮಂಜುನಾಥ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ತ್ಯಾಗ ಬಲಿದಾನ ಪ್ರತೀಕವಾದ ಈದುಲ್ ಅಝ್ಹಾ, ಬಕ್ರೀದ್ ಹಬ್ಬ ಆಚರಣೆ



ಬೇಲೂರಿನ ಗೆಂಡೆಹಳ್ಳಿ ರಸ್ತೆಯಲ್ಲಿರುವ ಈದ್ಗ ಮೈದಾನದಲ್ಲಿ ಬೇಲೂರಿನ ಮುಸ್ಲಿಂ ಬಾಂಧವರು. ಕೋಟೆ ಜಾಮಿಯ ಮಸೀದಿಯ ಗುರುಗಳಾದ ಇರ್ಫಾನ್ ರಜಾ ರವರ ನೇತೃತ್ವದಲ್ಲಿ.ಲೋಕ ಕಲ್ಯಾಣಕ್ಕಾಗಿ.ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಇರ್ಫಾನ್ ಗುರುಗಳು.

ಸರ್ವರಿಗೂ ತ್ಯಾಗ,ಬಲಿದಾನದ ಪ್ರತೀಕವಾದ ಈದುಲ್ ಅಝ್ಹಾ ಹಬ್ಬದ ಪ್ರೀತಿ ತುಂಬಿದ ಹಾರ್ಧಿಕ ಶುಭಾಷಯಗಳು

ಜಾತಿ ಧರ್ಮ ಬೇಧ ಭಾವವೆನ್ನದೆ ಪರಸ್ಪರ ಪ್ರೀತಿ ವಿಶ್ವಾಸದಿಂದ ಬಾಳುವಂತಾಗೋಣ ನಾವೆಲ್ಲರೂ, ಜಾತಿ, ಧರ್ಮಗಳ ಹೊರತಾಗಿ ಪ್ರೀತಿ, ಮಮತೆ, ಶಾಂತಿ ಸಹೋದರತೆಯನ್ನು ನಮ್ಮ ನಾಡಿನಲ್ಲಿ ಉಳಿಸಿ, ಬೆಳೆಸೋಣ

ಪ್ರವಾದಿ ಹಜರತ್ ಇಬ್ರಾಹಿಂ ಅವರ ತ್ಯಾಗ, ಬಲಿದಾನ, ಅಚಲ ದೈವಭಕ್ತಿ ಹಾಗೂ ಅವರ ಪುತ್ರ ಹಜರತ್ ಇಸ್ಮಾಯಿಲ್ ಅವರ ದೈವಭಕ್ತಿಯನ್ನು ಸಾಂಕೇತಿಕರಿಸುವ ಬಕ್ರೀದ್ ತ್ಯಾಗ-ಬಲಿದಾನವನ್ನು ಸ್ಮರಿಸುವ ಮಹತ್ವದ ಹಬ್ಬದ ಸಂಧರ್ಭದಲ್ಲಿ ಮಾನವೀಯ ಮೌಲ್ಯಗಳು ನಶಿಸುತ್ತಿರುವ ಪ್ರಸಕ್ತ ಕಾಲಘಟ್ಟದಲ್ಲಿ ಮಾನವ ಸಂಬಂಧಗಳನ್ನು ಗಟ್ಟಿಗೊಳಿಸಿ ,ಬಡವ ಶ್ರೀಮಂತರ ನಡುವಿನ ಅಂತರವನ್ನು ಕಡಿಮೆಗೊಳಿಸಲು ಇಂದಿನ ದಿನವು ನಮಗೆ ಪ್ರೇರಣೆಯಾಗಲಿ. ಈ ಶುಭ ದಿನದಂದು ಜಗತ್ತಿನಾದ್ಯಂತ ದೌರ್ಜನ್ಯಕ್ಕೂ,ದಬ್ಬಾಳಿಕೆಗೂ ,ಅವಮಾನಕ್ಕೂ ಒಳಗಾಗಿ, ನ್ಯಾಯ ನಿರಾಕರಿಸಲ್ಪಟ್ಟ ಜನಸಮುದಾಯದ ಪರವಾಗಿ ಪ್ರಾರ್ಥಿಸೋಣ. ಮತ್ತು ಇಸ್ಲಾಂ ಧರ್ಮದಲ್ಲಿ ಸ್ವಚ್ಛತೆಯ ಬಗ್ಗೆ ಪ್ರಮುಖ್ಯತೆ ನೀಡಿದ್ದಾರೆ. ಅದರಂತೆ ನೀವು ಸಹ ವಾಸಿಸುವ ಸ್ಥಳದಲ್ಲಿ ಸುತ್ತಮುತ್ತ ಪ್ರದೇಶಗಳಲ್ಲಿ.ಸ್ವಚ್ಛತೆ ಮತ್ತು ಸುಂದರಪರಿಸರ ಬಗ್ಗೆ ಕಾಳಜಿ ವಹಿಸಬೇಕು ಎಂದರು . ವಿಶೇಷವಾಗಿ ದೌರ್ಜನ್ಯಕ್ಕೆ ಒಳಗಾಗುವ ಬಡವರ ಬಗ್ಗೆ ಅಪಾರ ಕಾಳಜಿ ವಹಿಸಿ ಮುಖ್ಯ ವಾಹಿನಿಗೆ ತರುವಲ್ಲಿ ನಾವು ಕಾರ್ಯನಿರ್ವಹಿಸಬೇಕಾಗಿದೆ. ಕೇವಲ ಪ್ರಾಣಿ ಬಲಿ ನೀಡುವುದ ರಿಂದ ತ್ಯಾಗ ಬಲಿದಾನಕ್ಕೆ ಅರ್ಥವಿಲ್ಲ. ನಮ್ಮಲ್ಲಿರುವ ಅಸೂಹೆ. ಕೋಪ. ದುಷ್ಟ ನಿರ್ಧಾರಗಳು ಮೊದಲು ತ್ಯಜಿಸಿದರೆ ನಿಜವಾದ ಬಕ್ರೀದ್ ಹಬ್ಬವಾಗುತ್ತದೆ ಎಂದರು

ಈ ಸಂದರ್ಭದಲ್ಲಿ ಪೇಟೆ ಜಾಮಿಯ ಮಸೀದಿಯ ಗುರುಗಳು ಬೇಲೂರು ಪಟ್ಟಣದ ಭಕ್ತಾದಿಗಳ ಸಮೂಹ ಹಾಜರಿದ್ದರು. ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ವತಿಯಿಂದ ಸರ್ಕಲ್ ಇನ್ಸ್ಪೆಕ್ಟರ್ ಜಯರಾಮ್. ಸಬ್ ಇನ್ಸ್ಪೆಕ್ಟರ್ ಪ್ರವೀಣ್ ರವರ ನೇತೃತ್ವದಲ್ಲಿ ಸೂಕ್ತ ಬಂದೋಬಸ್ತ್ ನೀಡಲಾಗಿತ್ತು.

# ಸಾಗರದಲ್ಲಿ ಅತ್ಯಂತ ಸಂಭ್ರಮದಿಂದ ಜರುಗಿದ ಬಕ್ರೀದ್ ಹಬ್ಬ

ತ್ಯಾಗ ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಸೋಮವಾರ ಮುಸ್ಲಿಂ ಸಮುದಾಯದವರು ಸಂಭ್ರಮದಿಂದ ಆಚರಿಸಿದರು. ಮಳೆ ಹಿನ್ನೆಲೆಯಲ್ಲಿ ಈದ್ ಪ್ರಾರ್ಥನೆಯನ್ನು ಅವರವರ ಹತ್ತಿರದ ಪ್ರತಿ ಮಸೀದಿಯಲ್ಲೂ ನೆರವೇರಿಸಲಾಯಿತು. ಪಟ್ಟಣದ ಬದರ್ ಜಮಾ ಮಸೀದಿ, ಜಾಮಿಯಾ ಮಸೀದಿ, ಆಝಾದ್ ಮಸೀದಿ, ಶಿವಪ್ಪ ನಗರದ ನೂರಾನಿ ಅರಬ್ಬಿ ಮದರಸಾ .ತಾಳಗುಪ್ಪ ಸೇರಿದಂತೆ ಪಟ್ಟಣದ 25 ಮಸೀದಿಗಳಲ್ಲಿ ಬೆಳಗ್ಗೆ 7ರಿಂದ 9ರವರೆಗೆ ಪ್ರಾರ್ಥನೆ ಸಲ್ಲಿಸಲಾಯಿತು.

ಪ್ರತಿ ಮಸೀದಿಯಲ್ಲೂ ಧರ್ಮಗುರುಗಳು ವಿಶೇಷ ಪ್ರಾರ್ಥನೆ, ಬಕ್ರೀದ್ ಕುರಿತು ಪ್ರವಚನ ನೀಡಿದರು. ನಮಾಜ್ ಬಳಿಕ ಮೇಕೆ, ಆಡುಗಳನ್ನು ಕುರುಬಾನಿ ನೀಡಿದರು. ಪ್ರಾರ್ಥನೆ ನಂತರ ದಫನ್ ಭೂಮಿಗೆ ತೆರಳಿ, ಅಗಲಿದೆ ಕುಟುಂಬದ ಸದಸ್ಯರಿಗೆ ಪ್ರಾರ್ಥನೆ ಸಲ್ಲಿಸಿದರು. ಸಾಗರದ ಮಜಲಿಸೆ ಮುಲ್ತಜಿಮಾ ಕಮಿಟಿ ಅಧ್ಯಕ್ಷ ಆರ್.ಎ.ಕೆ. ಫಯಾಜ್, ಅಂಜುಮನೆ ಸಾಗರ್ ಸಮಿತಿ ಅಧ್ಯಕ್ಷ ಹಾಜಿ ಸೈಯ್ಯದ್ ಇಕ್ಬಾಲ್ ಸಾಬ್, ಸೈಯ್ಯದ್ ತಾಹಿರ್, ನಜೀರ್, ಆಸಿಫ್, ನೂರಾನಿ ಅರಬ್ಬಿ ಮಸೀದಿ ಅಧ್ಯಕ್ಷ ಸಾದಿಕ್, ಮಹ್ಮದ್ ಹಾಜಿ, ತಸ್ರೀಫ್ ಇಬ್ರಾಹಿಂ, ಸೈಯದ್ ಜಾಕೀರ್, ಅಬ್ದುಲ್ ಹಮೀದ್, ಮಹ್ಮದ್ ಖಾಸಿಂ ಜಾಕೀರ್ ಸೇರಿದಂತೆ ನೂರಾರು ಜನ ಹಾಜರಿದ್ದರು.



# ಅಕ್ರಮ ಗೋ ಸಾಗಾಟ

ಹೊಸನಗರ : ತಾಲೂಕಿನ ರಿಪ್ಪನ್ ಪೇಟೆಯಲ್ಲಿ ಅಕ್ರಮವಾಗಿ ಗೋ ಸಾಗಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ವಾಹನ ಸಮೇತ ಪಟ್ಟಣದ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ರಿಪ್ಪನ್ ಪೇಟೆಯಿಂದ ಆಯನೂರು ಮಾರ್ಗ ಸಾಗಿಸುತಿದ್ದ ಅಶೋಕ ಲೈಲ್ಯಾಡ್ ಗಾಡಿ ಕೆ ಎ.37 ಎ.2314 ನಂಬರ್‌ನ ವಾಹನದಲ್ಲಿ ಮೂರು ಜಾನುವಾರುಗಳನ್ನು




ಹಿಂಸಾತ್ಮಕವಾಗಿ ಬಂಧಿಸಿ ಕರೆದುಕೊಂಡು ಹೋಗುತಿದ್ದ ಕಂಡು ಸ್ಥಳೀಯರದ ದೇವರಾಜ್ ತಕ್ಷಣವೇ ಪೊಲೀಸ್ ರಿಗೆ ಮಾಹಿತಿ ನೀಡಿದರೆ. ಕೂಡಲೇ ತಕ್ಷಣ ಬಂದ ಪಿಎಸ್‌ಐ ಪ್ರವೀಣ್ ನೇತ್ರತ್ವದ ತಂಡ. ರಿಪ್ಪನ್ ಪೇಟೆ ಸಿದ್ದಪನಗುಡಿ ಹತ್ತಿರ ವಾಹನ ತಪಾಸಣೆ ಮಾಡಿದಾಗ ಮೂರು ಜಾನುವಾರು ಕಂಡು ಗಾಡಿ ಸಿಜ್ ಮಾಡಲಾಗಿದೆ. ರಿಪ್ಪನ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ....

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಮಂಗಳವಾರ 18 ಜೂನ್ 2024
TUESDAY 18 June 2024

# ಫಿಲಿಪ್ಸ್ ಇಂಜಿನಿಯರ್‌ಗಳಿಗಾಗಿ ಕೆಎಂಸಿಯಲ್ಲಿ ತರಬೇತಿ ಕಾರ್ಯಕ್ರಮ

ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ [ಮಾಹೆ] ನ ಸಾಂಸ್ಥಿಕ ಸಂಪರ್ಕ ಕಚೇರಿ [ ಆಫೀಸ್ ಆಫ್ ಕಾರ್ಪೊರೇಟ್ ರಿಲೇಶನ್ಸ್] ಏಕ ದಿನ ಚಿಕಿತ್ಸಾ ಸಾಮರ್ಥ್ಯ ಅಭಿವೃದ್ಧಿ [ಕ್ಲಿನಿಕಲ್ ಕಾಂಪಿಟೆನ್ಸಿ ಡೆವಲಪ್‌ಮೆಂಟ್] ಕಾರ್ಯಕ್ರಮವನ್ನು ಜೂನ್ 14, 2024ರಂದು ಹಮ್ಮಿಕೊಂಡಿದ್ದು ಬೆಂಗಳೂರಿನ ಫಿಲಿಪ್ಸ್ ನಾವೀನ್ಯ ಕೇಂದ್ರ [ಫಿಲಿಪ್ಸ್ ಇನ್ನೋವೇಶನ್ ಸೆಂಟರ್] ದ ಆ?ಯಂಬುಲೇಟರಿ ಮಾನಿಟರಿಂಗ್ [ಹೃತ್‌ವಿದ್ಯುತ್‌ಕ್ರಿಯೆಯ ಪರಿಶೀಲನ] ಮತ್ತು ಡಯಗ್ನಿಸ್ಟಿಕ್ಸ್ [ರೋಗನಿರ್ಣಯ] ವಿಭಾಗದ 14 ಮಂದಿ ಇಂಜಿನಿಯರ್‌ಗಳು ಇದರಲ್ಲಿ ಭಾಗವಹಿಸಿದರು.



ಈ ಕಾರ್ಯಕ್ರಮವು ವಿಶೇಷವಾಗಿ ಹೃದಯದಲ್ಲಿ ವಿದ್ಯುತ್‌ಕ್ರಿಯೆಯನ್ನು ಪರಿಶೀಲಿಸುವ ಮತ್ತು ಕಾಯಿಲೆಯನ್ನು ನಿರ್ಧರಿಸುವ ವಿಚಾರದ ಬಗ್ಗೆ ಕೇಂದ್ರೀಕೃತವಾಗಿದ್ದು, ಇದು ತಂತ್ರಜ್ಞಾನ [ಇಂಜಿನಿಯರಿಂಗ್] ಮತ್ತು ಆರೋಗ್ಯಆರೈಕೆಯ ವಿಭಾಗಗಳ ನಡುವಿನ ಅಂತರವನ್ನು ಕಡಿಮೆಗೊಳಿಸುವ ಮತ್ತು ಭಾಗಿಗಳಾದವರಿಗೆ ಸಮಗ್ರ ಪ್ರಾಯೋಗಿಕ ಅನುಭವವನ್ನು ನೀಡುವ ಕಾರ್ಯಕ್ರಮವಾಗಿತ್ತು. ಕೆಎಂಸಿಯ ನುರಿತ ಬೋಧಕರು ತರಗತಿಗಳನ್ನು ನಡೆಸಿಕೊಟ್ಟರಲ್ಲದೆ, ಹೃದಯ ಚಿಕಿತ್ಸೆಗೆ ಸಂಬಂಧಿಸಿದ ಉಪಕರಣಗಳ ಕಾರ್ಯ ವೈಖರಿ, ಅವುಗಳ ಅನ್ವಯಗಳು, ಮತ್ತು ರೋಗಿಗಳ ಚಿಕಿತ್ಸೆಯ ಸವಾಲುಗಳ ಭಾಗಿಗಳು ತಿಳಿದುಕೊಂಡರು. ಒಟ್ಟಾರೆಯಾಗಿ ಕಾರ್ಯಕ್ರಮವು ವಿಷಯಕವಾದ ಅರಿವಿನ ಜೊತೆಗೆ ಪ್ರಾಯೋಗಿಕ ಅನುಭವಗಳನ್ನು ನೀಡುವ ಕುರಿತು ಒತ್ತು ನೀಡಿತು.

ಮಾಹೆಯ ತಂತ್ರಜ್ಞಾನ ಮತ್ತು ವಿಜ್ಞಾನ ವಿಭಾಗದ ಸಹ-ಉಪಕುಲಪತಿಗಳಾದ ಡಾ. ನಾರಾಯಣ ಸಭಾಹಿತ್ ಅವರು ಭವಿಷ್ಯದಲ್ಲಿ ತಂತ್ರಜ್ಞಾನ ಮತ್ತು ವೈದ್ಯಕೀಯ ವಿಭಾಗಗಳ ನಡುವೆ ಸಂಬಂಧವನ್ನು ಸಾಂದ್ರಗೊಳಿಸುವ ಆಶಯವನ್ನು ಎತ್ತಿಹಿಡಿದರಲ್ಲದೆ, ಇಂಜಿನಿಯರ್‌ಗಳನ್ನು ವೈದ್ಯಕೀಯ ಜ್ಞಾನದೊಂದಿಗೆ ಸಿದ್ಧಗೊಳಿಸುವುದರ ಅಗತ್ಯದ ಕುರಿತು ಮಾತನಾಡಿದರು. 'ಸಾಮಾಜಿಕ ಸ್ವಾಸ್ಥ್ಯದ ಆವಶ್ಯಕತೆಯನ್ನು ಪೂರೈಸುವ ನಿಟ್ಟಿನಲ್ಲಿ ಆರೋಗ್ಯಆರೈಕೆ ಕ್ಷೇತ್ರದಲ್ಲಿ ಸುಧಾರಣೆಗಳನ್ನು ತರುವಲ್ಲಿ ಪ್ರಸ್ತುತ ಕಾರ್ಯಕ್ರಮವು ಪ್ರಮುಖ ಹೆಜ್ಜೆಯಾಗಿದೆ' ಎಂದರು.

ಮಾಹೆಯ ತಾಂತ್ರಿಕ ಮತ್ತು ಯೋಜನಾ ವಿಭಾಗದ ಸಹ-ಉಪಕುಲಪತಿಗಳಾದ ಡಾ. ಎನ್. ಎನ್. ಶರ್ಮಾ ಅವರು 'ಎರಡೂ ಜ್ಞಾನಶಿಸ್ತುಗಳ ಸಹಭಾಗಿತ್ವದಿಂದಾಗಿ ಕೇವಲ ತಾಂತ್ರಿಕ ಸುಧಾರಣೆಯಷ್ಟೇ ಅಲ್ಲ, ವೈದ್ಯಕೀಯ ಶುಶ್ರೂಷಾ ವಿಭಾಗದ ನವೀನ ಸಂಶೋಧನೆಗಳ ಪರಿಣಾಮವನ್ನು ಅರ್ಥಮಾಡಿಕೊಳ್ಳುವಲ್ಲಿಯೂ ಪರಿಣಾಮ ಬೀರಲಿದೆ. ಅಂತಿಮವಾಗಿ ರೋಗಿಗಳ ಶುಶ್ರೂಷೆಯಲ್ಲಿ ಸುಧಾರಣೆ ತರುವ ಜೀಪಪರ ಧೋರಣೆಯೇ ಈ ಕಾರ್ಯಕ್ರಮದ ಮುಖ್ಯ ಆಶಯವಾಗಿದೆ' ಎಂದರು.

ಮಾಹೆಯ ನಿಯೋಜಿತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಯೋಜನೆ ಮತ್ತು ಆರ್ಥಿಕ ವಿಭಾಗದ ನಿರ್ದೇಶಕ ಡಾ. ರವಿರಾಜ ಎನ್. ಎಸ್. ಅವರು ಕೃತಕ ಬುದ್ಧಿಮತ್ತೆ [ಆರ್ಟಿಫಿಶಲ್ ಇಂಟಲಿಜೆನ್ಸ್] ನಿಯಂತ್ರಿತ ಶುಶ್ರೂಷಾ ವಿಧಾನ, ವೈಯಕ್ತಿಕ ಶುಶ್ರೂಷೆ, ದೂರನಿಯಂತ್ರಿತವಾಗಿ ರೋಗಿಯ ಚಿಕಿತ್ಸೆ ಮುಂತಾದ ಅತ್ಯಾಧುನಿಕ ಸೌಲಭ್ಯಗಳ ನಿರ್ವಹಣೆಯಲ್ಲಿ ತಂತ್ರಜ್ಞಾನ ಮತ್ತು ವೈದ್ಯಕೀಯ ವ್ಯವಸ್ಥೆ ಜೊತೆಯಾಗಿ ಕಾರ್ಯನಿರ್ವಹಿಸಬೇಕಾಗಿರುವುದರ ಅಗತ್ಯವನ್ನು ಒತ್ತಿಹೇಳಿದರು.

## ಬಕ್ರೀದ್ ತ್ಯಾಗ ಬಲಿದಾನದ ಪ್ರತೀಕ-ಡಾ.ಮಿನಹಾಜುದ್ದೀನ

ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ಬಕ್ರೀದ್ ಹಬ್ಬದ ನಿಮಿತ್ಯ ಪಟ್ಟಣದ ಐತಿಹಾಸಿಕ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಈ ಸಂದರ್ಭದಲ್ಲಿ ಈದ ಪ್ರವಚನ ನೀಡಿದ ಡಾ. ಮಿನಹಾಜುದ್ದೀನ ಖಾಜಿ ಅವರು ತ್ಯಾಗ ಮತ್ತು ಬಲಿದಾನದ ಪ್ರತೀಕವಾಗಿರುವ ಬಕ್ರೀದ್ ಹಬ್ಬವು ಇತಿಹಾಸ ಪುರುಷ ಪ್ರವಾದಿ ಇಬ್ರಾಹಿಂರು ತಮ್ಮ ಪುತ್ರ ಇಸ್ಮಾಯೀಲರನ್ನು ದೇವ ಸಂಪ್ರೀತಿಗಾಗಿ ಬಲಿ ನೀಡಲು ಮುಂದಾದ ಅವಿಸ್ಮರಣೀಯ



ಘಟನೆಯನ್ನು ಸ್ಮರಿಸುವ ದಿನವಾಗಿದೆ. ನಾವೆಲ್ಲರೂ ದೇವನಲ್ಲಿ ಅಚಲವಾದ ವಿಶ್ವಾಸವನ್ನಿಟ್ಟು ಧರ್ಮದ ಆಚರಣೆ ಮತ್ತು ನಿಯಮಗಳನ್ನು ಪರಿಪಾಲಿಸಿ ಧರ್ಮವಂತರಾಗಬೇಕು ಎಂದ ಅವರು ಅಲ್ಲಾಹನಿಗೆ ಪ್ರಾಮಾಣಿಕ ಗುಣ ಅತ್ಯಂತ ಪ್ರಿಯವಾದದ್ದು ಅದನ್ನು ಬೆಳೆಸಿಕೊಂಡರೆ ಪುಣ್ಯ ಪ್ರಾಪ್ತವಾಗುತ್ತದೆ. ಎಂದಿಗೂ ಅನ್ಯಾಯದ ಮಾರ್ಗ ತಿಳಿಯಬಾರದು ಶ್ರಮವಹಿಸಿ ದುಡಿದ ಹಣದಿಂದ ದೊರಕುವ ಸಂತೃಪ್ತಿ ಪಾಪದ ದುಡ್ಡಿನಿಂದ ಎಂದೂ ದೊರಕುವುದಿಲ್ಲ ಬಡವರ ಕಷ್ಟಗಳಿಗೆ ಸ್ಪಂದಿಸಬೇಕು. ಕಷ್ಟದಲ್ಲಿರುವವರ ಸಮಸ್ಯೆಗಳಿಗೆ ಸ್ಪಂದಿಸಿದರೆ ಅಲ್ಲಾಹ ಸಂತುಷ್ಟ ನಾಗುತ್ತಾನೆ. ಪ್ರವಾದಿ ಮೊಹಮ್ಮದರ ಆದರ್ಶಗಳನ್ನು ಅನುದಿನವೂ ಅನುಸರಿಸಿ. ದುಶ್ಚಟಗಳಿಂದ ದೂರವಿದ್ದು ಉತ್ತಮ ಬದುಕನ್ನು ರೂಪಿಸಿಕೊಳ್ಳಿ ಧರ್ಮದ ತಿರುಳು ಅರಿಯದೆ ಹೋದರೆ ಇನ್ನೊಂದು ಧರ್ಮವನ್ನು ತಿಳಿಯುವುದು ಮತ್ತು ಪ್ರೀತಿಸುವುದು ಅಸಾಧ್ಯ ದೇಶದ ಕಾನೂನು ಮತ್ತು ಇತರ ಧರ್ಮಿಯರ ಭಾವನೆಗಳಿಗೆ ಧಕ್ಕೆ ಆಗದ ರೀತಿಯಲ್ಲಿ ಹಬ್ಬಗಳನ್ನು ಆಚರಿಸುವುದು ಎಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು. ಧಾರ್ಮಿಕ ಮುಖಂಡ ಸಯ್ಯದ್ ಶಕೀಲ ಅಹಮದ ಖಾಜಿ.ಹಫೀಜ ಇಬ್ರಾಹಿಂ ಮುಲ್ಲಾ. ಖಾಜಾಹುಸೇನ ಡೋಣಿ. ಅಬ್ದುಲ್ ರೆಹಮಾನ ಎಕೀನ.ಗನಿಸಾಬ ಲಾಹೋರಿ. ಅಲ್ಲಾಭಕ್ಷ ನಮಾಜಕಟ್ಟಿ.ಸಿಕಂದರ ವಠಾರ. ಅಬ್ದುಲ್ ರಜಾಕ್ ಮನಗೂಳಿ. ಸೈಯದ್ ಫಸಿಯುದ್ದೀನ ಖಾಜಿ. ಮಹಿಬೂಬ ಚೋರಗಸ್ತಿ.ಇಬ್ರಾಹೀಮ ಮನ್ಸೂರ.ಹಸನಸಾಬ ಮನಗೂಳಿ. ಅಬ್ದುಲ್ ರಹಿಮಾನ ನಮಾಜ ಕಟ್ಟಿ.ದಾದಾಪೀರ ಚೌದ್ರಿ. ಶಮಸುದ್ದೀನ ನಾಲಬಂದ. ಕೆ.ಆಯ್.ಸಗರ.ಎಂ.ಎ.ಮೇತ್ರಿ.ರೋಶನ ಡೋಣಿ. ಅಬ್ದುಲ್ ಸತ್ತಾರ ಅವಟಿ.ಫಯಾಜ ಖಾಜಿ.ಮುಜಾಹೀದ ನಮಾಜ ಕಟ್ಟಿ.ತನವೀರ ಮನಗೂಳಿ.ಶಫೀಕ ಇನಾಮದಾರ ಇತರರು ಇದ್ದರು.

# ಚುನಾವಣಾ ಪೂರ್ವಭಾವಿ ಸಭೆ

ಕೆಆರ್‌ಪೇಟೆ: ಮುಂದಿನ ತಿಂಗಳು 21 ರಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಚುನಾವಣೆಯು ನಡೆಯಲಿರುವ ಅಂಗವಾಗಿ ಪಟ್ಟಣದಲ್ಲಿರುವ ರಾಮದಾಸ್ ಸುಲೋಚನ ಸಭಾಂಗಣದಲ್ಲಿ ಚುನಾವಣಾ ಪೂರ್ವ ಭಾವಿ ಸಭೆ ನಡೆಯಿತು.

ಸಭೆಯಲ್ಲಿ ಭಾಗವಹಿಸಿದ್ದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಮುಖಂಡ ಎಲ್ ಐ ಸಿ ಶಿವಪ್ಪ ಮಾತನಾಡಿ ಈಗಾಗಲೇ ಐದು ವರ್ಷದ ಅವಧಿಗೆ ತಾಲ್ಲೂಕು ಅಧ್ಯಕ್ಷರಾಗಿದ್ದ ವಕೀಲರು ಹಾಗೂ ಮಹಾಸಭಾದ ಅಧ್ಯಕ್ಷ ವಿ ಎಸ್ ಧನಂಜಯಕುಮಾರ್ ನಮ್ಮ ಸಮುದಾಯದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ. ನಮ್ಮ ಸಮುದಾಯದಲ್ಲಿ ಯಾರಾದರೂ ಕಷ್ಟದಲ್ಲಿದ್ದರೆ ಅವರಿಗೆ ಆರ್ಥಿಕ ಸಹಾಯ ಮಾಡುವುದು. ಬಡವರ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಆರ್ಥಿಕ ಸಹಾಯ ಮಾಡುವುದು.15 ಕೋಟಿ ಬೆಲೆ ಬಾಳುವ ಸಮುದಾಯದ ನಿವೇಶನವು ನ್ಯಾಯಾಲಯದ ಹಂತದಲ್ಲಿದೆ.ಅದರ ಬಗ್ಗೆ ತಮ್ಮ ಸ್ವಂತ ಖರ್ಚಿನಲ್ಲಿ ವ್ಯಾಜ್ಯವನ್ನು ಆಡುತ್ತಿದ್ದಾರೆ. ಅಲ್ಲದೆ ಸಮುದಾಯದಲ್ಲಿ ಯಾವುದೇ ವ್ಯಕ್ತಿ ಸಂಕಷ್ಟಕ್ಕೆ ಸಿಲುಕಿದರೆ ಅವರಿಗೆ ಯಾವುದಾದರೂ ರೂಪದಲ್ಲಿ ಸಹಾಯವನ್ನು ಮಾಡುತ್ತಾ ಬಂದಿದ್ದಾರೆ. ಮುಂದೆ ಬರುವ ನಮ್ಮ ಸಮುದಾಯದ ಚುನಾವಣೆಯಲ್ಲಿ ಮತ್ತೊಮ್ಮೆ ಅಧ್ಯಕ್ಷರಾಗಿ ಆಯ್ಕೆಯಾಗಿ ನಮ್ಮ ಸಮುದಾಯದ ಅಭಿವೃದ್ಧಿಗೆ ಶ್ರಮಿಸಲು ವಿ ಎಸ್ ಧನಂಜಯಕುಮಾರ್ ಅವರನ್ನು ಆಶೀರ್ವದಿಸುವಂತೆ ಸಭೆಯಲ್ಲಿ ಮನವಿ ಮಾಡಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಮತ್ತೊಮ್ಮೆ ಸ್ಪರ್ಧಾಕಾಂಕ್ಷಿ ವಿ ಎಸ್ ಧನಂಜಯಕುಮಾರ್ ಮಾತನಾಡಿ ಐದು ವರ್ಷದ ಅವಧಿಗೆ ನನ್ನನ್ನು ಆಯ್ಕೆಮಾಡಿದ ನಮ್ಮ ಸಮುದಾಯದ ಎಲ್ಲಾ ಹಿರಿಯರು,ಎಲ್ಲರಿಗೂ ಅನಂತ ಅಭಿನಂದನೆಗಳು. ನನಗೆ ಮೊದಮೊದಲು ರಾಜಕಾರಣದ ಬಗ್ಗೆ ಅರಿವಿರಲಿಲ್ಲ. ಅಂತಹ ಸಂದರ್ಭದಲ್ಲಿ ನನ್ನನ್ನು ಅಭೂತಪೂರ್ವ ಗೆಲುವು ಸಾಧಿಸಲು ಸಾಧ್ಯವಾಯಿತು. ಅದರೆ ನನ್ನ ಅಧಿಕಾರದ ಅವಧಿಯಲ್ಲಿ ಕೊರೋನ ಎಂಬ ಮಹಾಮಾರಿಯ ದರ್ಶನದಿಂದ ಹಾಗೂ ನಮ್ಮ ಸಮುದಾಯದಲ್ಲೂ ಕೆಲವು ಮುಖಂಡರಿಂದ ಮೊದಮೊದಲು ಅಸಹಕಾರದಿಂದ ಅಭಿವೃದ್ಧಿಯು



ಮರೀಚಿಕೆಯಾಯಿತು.ಆದರೂ ನನ್ನ ಶಕ್ತಿ ಮೀರಿ ಸಮುದಾಯದ ಅಭಿವೃದ್ಧಿಗೆ ದುಡಿದಿದ್ದೇನೆ.ಮುಂದೆಯೂ ಸಹ ನನ್ನ ಸಮುದಾಯದ ಅಭಿವೃದ್ಧಿಯ ಬಗ್ಗೆ ಸಾಕಷ್ಟು ಯೋಜನೆಗಳನ್ನು ರೂಪಿಸಲು ಯೋಜನೆ ಹಾಕಿಕೊಂಡಿದ್ದೇನೆ.ನನಗೂ ಸಮುದಾಯದ ಚುನಾವಣೆಯು ನಡೆಯುವುದು ಬೇಡ ಎಂಬ ಆಸೆ ಇದೆ.

ಆದರೆ ವಿರೋಧಿಗಳು ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದರೇ ಅದಕ್ಕೂ ಸಿದ್ದ.ಸಂಘಕ್ಕೆ ಚುನಾವಣೆ ನಡೆದರೂ ಅದಕ್ಕೂ ಸಿದ್ದವಾಗಿದ್ದೇವೆ.ಬೇಕಾದರೆ ನನ್ನ ಬೆಂಬಲಿಗರು ಮಹಾಸಭಾದ ಚುನಾವಣೆಗೆ ಸ್ಪರ್ಧೆ ಬಯಸಿದರೆ ಅವರಿಗೆ ತನು ಮನ ಧನ ಅರ್ಪಿಸಲು ಸಿದ್ದ ಆದರೆ ನನ್ನ ಬೆಂಬಲಿಗರು ನನ್ನನ್ನು ಮುಂದಿನ ಅವಧಿಗೂ ನೀವೇ ಅಧ್ಯಕ್ಷರಾಗಬೇಕು ಎಂದು ಹಠ ಹಿಡಿದಿದ್ದಾರೆ. ಆದ್ದರಿಂದ ಮುಂದಿನ ದಿನಗಳಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ನಡೆಯುವ ಚುನಾವಣೆಯಲ್ಲಿ ನನ್ನನ್ನು ಮತ್ತೊಮ್ಮೆ ಆಶೀರ್ವದಿಸುವ ವಿಶ್ವಾಸವಿದೆ.ನನ್ನ ಉಸಿರಿರುವ ತನಕವೂ ಸಮುದಾಯದ ಪರವಾಗಿ ಯಾವುದೇ ಹೋರಾಟಕ್ಕೆ ಸಿದ್ದ ಹಾಗೂ ಸಮುದಾಯಕ್ಕೆ ಬದ್ದನಾಗಿರುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಉಪಾಧ್ಯಕ್ಷ ಆನಂದ್ (ಅಖಿಲ ಭಾರತ ವೀರಶೈವ ಲಿಂಗಾಯತ ಜಿಲ್ಲಾ ಸಂಘದ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ದಿ) ಪ್ರಧಾನ ಕಾರ್ಯದರ್ಶಿ ಬಿ ಎಸ್ ಈರಪ್ಪ,ಕಾರ್ಯದರ್ಶಿ ಮಹದೇಶ,ನಿರ್ದೇಶಕರಾದ ಡಿ ಸಿ ಕುಮಾರ್, ಶಿವಮೂರ್ತಿ, ಶಿವಪ್ಪ ಎಲ್ ಐ ಸಿ,ಸಮುದಾಯದ ಮುಖಂಡರಾದ ಲಿಂಗಾಪುರ ಶಿವಪ್ಪ, ಚಿಕ್ಕ ಬಸಪ್ಪ ಸೋಮನಾಥಪುರ, ಮಲ್ಲೇಶ್, ಶಿವಶಂಕರಪ್ಪ,ಮಂಚಿಬೀಡು ಬಸವಲಿಂಗಪ್ಪ, ನಂಜುಂಡಪ್ಪ,ಪರಮೇಶ್, ಕೇಬಲ್ ಗುಂಡ,ಶಿವಕುಮಾರ್, ಮಹದೇವಣ್ಣ,ಮಹೇಶ್, ಯಡಿಯೂರಪ್ಪ, ಕುಮಾರ್, ಲೋಕೇಶ್, ವೀರಭದ್ರಪ್ಪ, ಮಹಾದೇವಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಪ್ರತ್ಯೇಕ ಪ್ರಕರಣ ಇಬ್ಬರೂ ಆತ್ಮಹತ್ಯೆ ಶರಣು

ಗುಂಡ್ಲುಪೇಟೆ: ತಾಲೂಕಿನ ಆಲತ್ತೂರು ಗ್ರಾಮದ ದೇವರಾಜು(28) ಆತ್ಮಹತ್ಯೆಗೆ ಶರಣಾದ ಯುವಕ. ಈತ ಕುಡಿದ ಅಮಲಿನಲ್ಲಿ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಬರಗಿ ಕೆರೆಯಲ್ಲಿ ಮೃತದೇಹ ತೇಲುತ್ತಿರುವುದನ್ನು ಗಮನಿಸಿದ ಸ್ಥಳೀಯರು ಗುಂಡ್ಲುಪೇಟೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ನಂತರ ಸ್ಥಳಕ್ಕಾಗಮಿಸಿದ ಪೊಲೀಸರು ಸ್ಥಳೀಯರ ಸಹಾಯದಿಂದ ಮೇಲೆತ್ತಿದ್ದಾರೆ. ತದ ನಂತರ ಮೃತದೇಹವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ, ಮರಣೋತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಹಸ್ತಾಂತರ ಮಾಡಿದ್ದಾರೆ. ವ್ಯಕ್ತಿಯೋರ್ವ ಕುಡಿದ ಮತ್ತಿನಲ್ಲಿ ಮಾಡಿಕೊಂಡಿದ್ದಾರೆ. ನಂತರ ಗುಂಡ್ಲುಪೇಟೆ ಪೊಲೀಸರು ಸ್ಥಳಕ್ಕೆ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಪಟ್ಟಣದ ಹೊರ ವಲಯದ ಸ್ಮಶಾನ ಪಕ್ಕದಲ್ಲಿ ನಡೆದಿದೆ. ತಾಲೂಕಿನ ಬಸವಾಪುರ ಗ್ರಾಮದ ನಾಗರಾಜು(55) ನೇಣಿಗೆ ಶರಣಾದ ವ್ಯಕ್ತಿ, ಈತ ಕುಡಿದ ಅಮಲಿನಲ್ಲಿ ಪಟ್ಟಣದ ಹೊರ ದೌಡಾಯಿಸಿ ಮೃತದೇಹವನ್ನು ಮರದಿಂದ ಕೆಳಕ್ಕೆ ಇಳಿಸಿ, ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದ್ದಾರೆ. ಸಾರ್ವಜನಿಕ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ನಂತರ ಮೃತ ದೇಹವನ್ನು ವಾರಸುದಾರರಿಗೆ ಹಸ್ತಾಂತರ ಮಾಡಲಾಗಿದೆ.

# ಸಾಗರದ ವರದಮೂಲದಲ್ಲಿ ಅಭಿನಂದನಾ ಸಮಾರಂಭ

ಸಾಗರ ತಾಲೂಕಿನಲ್ಲಿ ವರದಾಮೂಲದಲ್ಲಿರುವ ಒಗ್ಗಟ್ಟು, ವಿಶ್ವಾಸ, ಸಹಕಾರ ಬೇರೆ ಕಡೆ ಕಾಣುವುದಿಲ್ಲ. ಊರಿನ ವಿಷಯವಾಗಿ ಎಲ್ಲರೂ ಒಟ್ಟಾಗಿ ನಿಲ್ಲುವ ವಿಚಾರದಲ್ಲಿ ಇತರ ಗ್ರಾಮದವರಿಗೆ ಮಾದರಿಯಾಗಿದ್ದೇವೆ ಎಂದು ಭೀಮನಕೋಣೆ ಗ್ರಾಮ ಪಂಚಾಯತಿ ಅಧ್ಯಕ್ಷ ಮಂಜುನಾಥ್ ಶೆಟ್ಟಿ ಹೇಳಿದರು.

ತಾಲೂಕಿನ ವರದಾಮೂಲದಲ್ಲಿ ಭಾನುವಾರ ಸಂಜೆ ಗ್ರಾಮಾಭಿವೃದ್ಧಿ ಮಂಡಳಿ ವರದಾಮೂಲದವರು ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಒಳ್ಳೆಯದನ್ನು ಮಾಡಬೇಕೆನ್ನುವ ಮನಸ್ಥಿತಿ ಇಷ್ಟು ಕೆಲಸಕ್ಕೆ ಸಾಧ್ಯವಾಗಿದೆ. ಇನ್ನೂ ಒಂದಷ್ಟು ಕೆಲಸ ಬಾಕಿ ಇದೆ. ಮುಂದೆಯೂ



ಎಲ್ಲರೂ ಒಟ್ಟಾಗಿ ಊರಿನ ಕಾರ್ಯದಲ್ಲಿ ತೊಡಗಿಕೊಳ್ಳೋಣ. ಇದು ಎಲ್ಲರಿಗೂ ಹೆಮ್ಮೆಯ ಸಂಗತಿ. ಇಡೀ ಗ್ರಾಮದವರೂ ಒಗ್ಗಟ್ಟಿನಿಂದ ದೇವರ ಕಾರ್ಯದಲ್ಲಿ ತೊಡಗಿಕೊಂಡಿದ್ದೇವೆ. ಇದರಿಂದಲೇ ದೇವಸ್ಥಾನಕ್ಕೆ ಹೆಚ್ಚು ಹಣ ತರಲು ಸಾಧ್ಯವಾಯಿತು. ಸಾರ್ವಜನಿಕರ, ಸುತ್ತಲಿನ ಗ್ರಾಮಸ್ಥರ ಸೇವೆ ಸಹಕಾರವೂ ಇದೆ ಎಂದರು. ವರದಾಂಬಾ ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷ ರಮೇಶ ಮಾತನಾಡಿ, ನಮ್ಮ ಭಾಗದ ಗ್ರಾಮ ಪಂಚಾಯತಿ ಸದಸ್ಯರು ಮುಂದೆ ಉತ್ತಮ ಸ್ಥಾನಕ್ಕೆ ಹೋಗುವಂತಾಗಲಿ. ರಾಜಕೀಯದಲ್ಲಿ ಒಳ್ಳೆಯ ಸ್ಥಾನ ಪಡೆಯಲಿ. ಊರಿನ ಯುವ ಸೇನಾನಿ ಮುಂದಿನ ದಿನಗಳಲ್ಲಿ ಹೆಚ್ಚು ಸಾಧನೆ ಮಾಡುವಂತಾಗಲಿ. ಕ್ಷೇತ್ರ ದೇವತೆ ಇವರಿಗೆ ಆಯಸ್ಸು, ಆರೋಗ್ಯ ನೀಡಲಿ ಎಂದರು. ಇದೇ ವೇಳೆ ವಾಯುಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಮೇಲಿನಕವಲಕೋಡು ಗ್ರಾಮದ ಯುವಕ ಪ್ರಸಾದ (ಮನು)ರನ್ನು ಅಭಿನಂದಿಸಲಾಯಿತು.

ವರದಾಮೂಲ ಗ್ರಾಮಾಭಿವೃದ್ಧಿ ಮಂಡಳಿ ಅಧ್ಯಕ್ಷ ಮಂಜಪ್ಪ ಅಧ್ಯಕ್ಷತೆ ವಹಿಸಿದ್ದರು. ಪ್ರಮುಖರಾದ ಗಣಪತಿ ತೀರ್ಥ, ಪ್ರಕಾಶ್ ವರದಮೂಲ, ಶೆಡ್ತೀಕೆರೆ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಗಣೇಶ, ಗ್ರಾಮಸ್ಥರಾದ ಉದಯ ಶೆಟ್ಟಿ ಅಭಿನಂದನಾ ನುಡಿಯನ್ನು ಹೇಳಿದರು. ವ.ಶಂ. ರಾಮಚಂದ್ರ ಭಟ್ ನಿರೂಪಿಸಿದರು. ಪ್ರಮುಖರಾದ ತೀರ್ಥ ರಾಮಣ್ಣ, ತಿಮ್ಮಣ್ಣ, ವರದ ಭಟ್, ರಾಧಾಕೃಷ್ಣ ಭಟ್, ನಾಗರಾಜ್, ಶ್ರೀಕಾಂತ್, ಅಶೋಕ ಪಂಡ್ರಿ, ಗೋಪು ಶೆಟ್ಟಿ, ರಾಘವೇಂದ್ರ ಶೆಟ್ಟಿ, ಸೇರಿದಂತೆ ಹಲವರು ಹಾಜರಿದ್ದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಮಂಗಳವಾರ 18 ಜೂನ್ 2024
TUESDAY 18 June 2024

# ಶಿಕ್ಷಕರ ಸಮಸ್ಯೆಗಳಿಗೆ ಧ್ವನಿಯಾಗುವೆ–ಶಾಸಕ ವಿವೇಕಾನಂದ

ಮದ್ದೂರು: ಶಿಕ್ಷಕರ ಸಮಸ್ಯೆಗಳನ್ನು ಹತ್ತಿರದಿಂದ ಬಲ್ಲವನಾಗಿದ್ದು, ಸದನದ ಹೊರಗೆ ಮತ್ತು ಒಳಗೆ ಶಿಕ್ಷಕರ ಧ್ವನಿಯಾಗಿ ನಿರಂತರವಾಗಿ ಕಾರ್ಯನಿರ್ವಹಿಸಲಿದ್ದೇನೆ ಎಂದು ದಕ್ಷಿಣ ಶಿಕ್ಷಕರ ಕ್ಷೇತ್ರದ ನೂತನ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ ಅವರು ಭರವಸೆ ವ್ಯಕ್ತಪಡಿಸಿದರು.

ಪಟ್ಟಣದ ಸರ್ಕಾರಿ ನೌಕರರ ಕಚೇರಿಯಲ್ಲಿ ಶನಿವಾರ ನೂತನ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ ಅವರಿಗೆ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಶಿಕ್ಷಕರು ಮತ್ತು ಸರ್ಕಾರಿ ನೌಕರರಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ನಾನು ಮಾತನಾಡುವವನಲ್ಲ ಕೆಲಸ ಮಾಡಿ ತೋರಿಸುವವನು. ನನ್ನ ಚುನಾವಣೆಯಲ್ಲಿ ನನ್ನ ಪ್ರತಿಸ್ಪರ್ಧಿಯಾಗಿದ್ದ ಮರಿತಿಬ್ಬೇಗೌಡ ಅವರು ಶಿಕ್ಷಕರ ಕ್ಷೇತ್ರದಲ್ಲಿ 24 ವರ್ಷಗಳ ಕಾಲ ಶಾಸಕರಾಗಿದ್ದರೂ ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸಿಲ್ಲ. ನಾನು 6 ವರ್ಷಗಳಲ್ಲಿ ಶಕ್ತಿಮೀರಿ ಕೆಲಸ ಮಾಡುವ ಮೂಲಕ ಶಿಕ್ಷಕರ ಸಮಸ್ಯೆಗಳನ್ನು ಬಗೆ ಹರಿಸುತ್ತೇನೆ. ಸರ್ಕಾರ ನನಗೆ ನೀಡುವ ಎಲ್ಲಾ ರೀತಿಯ ಭತ್ಯೆಗಳನ್ನು ಶಿಕ್ಷಕರ ಕಲ್ಯಾಣಕ್ಕಾಗಿ ವಿನಿಯೋಗಿಸುತ್ತೇನೆ ಎಂದರು.

ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಕೊಪ್ಪ ಶಿವರಾಮು ಮಾತನಾಡಿ, ನೂತನ ಶಾಸಕರಾದ ನಿಮ್ಮ ಮೇಲೆ ಮಹತ್ವರವಾದ ಜವಾಬ್ದಾರಿಯಿದ್ದು ಶಿಕ್ಷಕರ ಸಮಸ್ಯೆಗಳಿಗೆ ಮತ್ತು ಶ್ರೇಯೋಭಿವೃದ್ಧಿಗೆ



*ಮದ್ದೂರು ಪಟ್ಟಣದ ಸರ್ಕಾರಿ ನೌಕರರ ಕಚೇರಿಯಲ್ಲಿ ನೂತನ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ ಅವರನ್ನು ಅಭಿನಂದಿಸಲಾಯಿತು. ಸಿ.ಎಚ್.ಕಾಳೀರಯ್ಯ, ಕೊಪ್ಪ ಶಿವರಾಜು, ಪ್ರೊ.ಬೋರೇಗೌಡ, ಡಿ.ಪಿ.ಸ್ವಾಮಿ, ಕೆ.ಪಿ.ಯೋಗೇಶ್ ಇದ್ದರು.*

ಶ್ರಮಿಸಬೇಕು ಎಂದು ಮನವಿ ಮಾಡಿದರು.

ನಿವೃತ್ತ ಪ್ರಾಧ್ಯಾಪಕ ಪ್ರೊ.ಬಿ.ಎಸ್.ಬೋರೇಗೌಡ ಮಾತನಾಡಿ, ಶಿಕ್ಷಕರು ಕರೆ ಮಾಡಿದಾಗ ಸ್ವೀಕರಿಸಿ ಮಾತನಾಡಬೇಕು.

ಹಿಂದಿನ ಶಾಸಕರು (ಮರಿತಿಬ್ಬೇಗೌಡರು) ಕರೆ ಸ್ವೀಕರಿಸುತ್ತಿಲ್ಲ ಎಂಬ ಕಾರಣಕ್ಕಾಗಿಯೇ ನಿಮಗೆ ಮೊದಲ ಪ್ರಾಶಸ್ತ್ಯ ಮತಗಳಲ್ಲೇ ಜಯಶೀಲರನ್ನಾಗಿ ಮಾಡಿದ್ದಾರೆ. ಅತ್ಯುತ್ತಮ ಶಾಸಕ ಪ್ರಶಸ್ತಿ ಪಡೆದ ಕೆ.ಟಿ.ಶ್ರೀಕಂಠೇಗೌಡ ಅವರ ನಡೆಯನ್ನು ನೀವು ಅನುಸರಿಸಬೇಕು ಎಂದು ಸಲಹೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಚ್.ಕಾಳೀರಯ್ಯ, ಕರ್ನಾಟಕ ಜಾನಪದ ಜಿಲ್ಲಾಧ್ಯಕ್ಷ ಡಿ.ಪಿ.ಸ್ವಾಮಿ, ಜಿಲ್ಲಾ ಮುಖ್ಯ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಪಿ.ಯೋಗೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಅಧ್ಯಕ್ಷ ದೇವರಾಜು, ಪ್ರಧಾನ ಕಾರ್ಯದರ್ಶಿ ರವಿಚಂದ್ರ, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಬೈರೇಗೌಡ ಹಾಗೂ ಮಹೇಶ್, ರವಿಶಂಕರೇಗೌಡ, ಮಲ್ಲಿಕಾರ್ಜುನ, ನಾಗೇಂದ್ರ, ಸೋಮಣ್ಣ, ರವಿಕುಮಾರ್, ಕುಮಾರಸ್ವಾಮಿ ಇದ್ದರು.

# ರಾಜ್ಯ ಸರಕಾರದ ವಿರುದ್ಧ ಕಾರ್ಯಕರ್ತರ ಆಕ್ರೋಶ



**ಗಮನ ಸೆಳೆದ ಎತ್ತಿನಗಾಡಿ ಪ್ರದರ್ಶನ..**

ಎತ್ತಿನಗಾಡಿಯಲ್ಲಿ ದ್ವಿಚಕ್ರವಾಹನ ಇಟ್ಟುಕೊಂಡು ಕೊರಟಗೆರೆ ಪಟ್ಟಣದ ತುಂಬೆಲ್ಲಾ ಘೋಷಣೆಗಳೆಲ್ಲ ಕೂಗುತ್ತಾ ರಾಜ್ಯ ಸರಕಾರದ ವಿರುದ್ಧ ಘೋಷಣೆ ಕೂಗಿದರು. ನಂತರ ಬಿಜೆಪಿ ಮುಖಂಡ ಅನಿಲ್‌ಕುಮಾರ್ ಜೊತೆ ಕಾರ್ಯಕರ್ತರು ಬೈಸಿಕಲ್ ತುಳಿದುಕೊಂಡು ಪೆಟ್ರೋಲ್ ಮತ್ತು ಡಿಸೇಲ್ ಬೆಲೆಏರಿಕೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು ಸಾರ್ವಜನಿಕರ ಗಮನ ಸೆಳೆಯಿತು.

**ಮೂಲ ಬಿಜೆಪಿ ಮುಖಂಡರ ಬೇಸರ..**

ಬಿಜೆಪಿ ಕಾರ್ಯಕ್ರಮ ಮತ್ತು ಸಭೆಗಳಲ್ಲಿ ಕೊರಟಗೆರೆಯ ಮೂಲ ಕಾರ್ಯಕರ್ತರನ್ನು ಕಡೆಗಣನೆ ಮಾಡಲಾಗ್ತಿದೆ. ಹತ್ತಾರು ವರ್ಷಗಳಿಂದ ಬಿಜೆಪಿ ಬಾವುಟ ಕಟ್ಟಿಬೆಳೆಸಿದ ಕಾರ್ಯಕರ್ತರ ಮೂಲೆಗುಂಪು ಮಾಡ್ತಿದೆ ಎಂದು ಆರೋಪಿಸಿ ಕಾರ್ಯಕರ್ತರು ಪ್ರತಿಭಟನೆ ವೇಳೆಯೇ ಬೇಸರ ವ್ಯಕ್ತಪಡಿಸಿದರು.

ಕೊರಟಗೆರೆ:– ರಾಜ್ಯ ಸರಕಾರ ಕಳೆದ 20 ತಿಂಗಳಿಂದ ರಾಜ್ಯದ ಯಾವುದೇ ಕೆಲಸಗಳಿಗೂ ಶಂಕುಸ್ಥಾಪನೆ ಮಾಡಿಲ್ಲ, ಸರಕಾರಿ ಇಲಾಖೆಯ ಅಧಿಕಾರಿಗಳಿಗೆ ಸಂಬಳ ನೀಡಲು ಸರಕಾರದ ಬಳಿ ಹಣವಿಲ್ಲ, ಗ್ಯಾರಂಟಿ ಯೋಜನೆಗಾಗಿ ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ಪ್ರತಿನಿತ್ಯ ಬೆಲೆಏರಿಕೆ ಮಾಡ್ತಿದೆ ಎಂದು ಎನ್‌ಡಿಎ ಕಾರ್ಯಕರ್ತರು ಸೋಮವಾರ ಪ್ರತಿಭಟನೆ ನಡೆಸಿದರು.

ಕೊರಟಗೆರೆ ಪಟ್ಟಣದ ಎನ್‌ಡಿಎ ಕಚೇರಿಯಿಂದ ಪಟ್ಟಣದ ಮುಖ್ಯರಸ್ತೆಯ ಮೂಲಕ ಸರಕಾರಿ ಬಸ್ ನಿಲ್ದಾಣದ ವರೇಗೆ ಎತ್ತಿನಗಾಡಿ ಮತ್ತು ಬೈಸಿಕಲ್‌ಗಳಲ್ಲಿ ನೂರಾರು ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರದ ಬೆಲೆ ಏರಿಕೆಯ ವಿರುದ್ಧ ಘೋಷಣೆಯನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ ಮಾತನಾಡಿ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ರೈತರ ವಿರೋಧವಾಗಿ ಕೆಲಸ ಮಾಡ್ತಿದ್ದಾರೇ. ಗ್ಯಾರಂಟಿ ಯೋಜನೆಯ ಹೆಸರಿನಲ್ಲಿ ಗ್ರಾಹಕ ಜೋಬಿಗೆ ಕೈ ಹಾಕಿದೆ . ಎಡಗೈಯಲ್ಲಿ ಕೊಟ್ಟು ಬಲಗೈಯಿಂದ ಕಸಿಯುತ್ತಿದೆ. ಅಧಿಕಾರಿಗಳ ಸಂಬಳಕ್ಕೂ ಸರಕಾರದ ಬಳಿ ಹಣ ಇಲ್ಲದೇ ಪರದಾಟ ನಡೆಸುತ್ತಿದೆ ಎಂದು ಕಿಡಿಕಾರಿದರು.

ಕೊರಟಗೆರೆ ಬಿಜೆಪಿ ಮುಖಂಡ ಬಿ.ಹೆಚ್.ಅನಿಲ್ ಕುಮಾರ್ ಮಾತನಾಡಿ ಲೋಕಸಭಾ ಚುನಾವಣೆ ಮುಕ್ತಾಯದ ಮರುಕ್ಷಣವೇ ಮಧ್ಯದ ಬೆಲೆ, ಸ್ಟಾಂಪ್ ಮತ್ತು ರಿಜಿಸ್ಟರ್ ಪೇಪರ್ ಹೆಚ್ಚಳವಾಯ್ತು.

ಪ್ರಸ್ತುತ ಪೇಟ್ರೋಲ್ ಮತ್ತು ಡಿಸೇಲ್ ಬೆಲೆ ಜಾಸ್ತಿಯಿಂದ ಗ್ರಾಹಕರ ಜೀವನವೇ ಸಂಕಷ್ಟಕ್ಕೆ ತಲುಪಿದೆ. ರಾಜ್ಯ ಸರಕಾರ ಕಳೆದ ಎರಡು ವರ್ಷಗಳಿಂದ ಯಾವುದೇ ಅಭಿವೃದ್ಧಿ ಕೆಲಸಕ್ಕೆ ಚಾಲನೆ ನೀಡಿಲ್ಲ ಎಂದು ಆರೋಪ ಮಾಡಿದರು.

ಪ್ರತಿಭಟನೆಯಲ್ಲಿ ಕೊರಟಗೆರೆ ಮಂಡಲ ಅಧ್ಯಕ್ಷ ಜೆಡಿಎಸ್ ಗೌರವಧ್ಯಕ್ಷ ನರಸಿಂಹರಾಜು, ಮಧುಗಿರಿ ಯುವಮೋರ್ಚ ಅಧ್ಯಕ್ಷ ಶಿವಕುಮಾರ ಸ್ವಾಮಿ, ಮುಖಂಡರಾದ ದಾಸಾಲುಕುಂಟೆ ರಘು, ದಾಡಿವೆಂಕಟೇಶ್, ರಂಗರಾಜು, ಅರುಣಕುಮಾರ್, ಗೋವಿಂದರೆಡ್ಡಿ, ಚೇತನ್, ಮಂಜುನಾಥ, ಸುರೇಶ್, ಆನಂದ್, ವಕೀಲ ಸಂತೋಷ, ವಿಶ್ವನಾಥ ಅಪ್ಪಾಜಪ್ಪ, ಸೇರಿದಂತೆ ಇತರರು ಇದ್ದರು.

# ಕೆ.ಆರ್.ಪೇಟೆ: ಪಟ್ಟಣಕ್ಕೆ ಚಲನಚಿತ್ರ ನಟ ಡಾ. ಅನಿರುದ್ಧ್ ನಾಳೆ ಆಗಮನ



ಕನ್ನಡ ಚಲನಚಿತ್ರರಂಗದ ಹಿರಿಯ ನಾಯಕ ನಟ ದಿವಂಗತ ಡಾ. ವಿಷ್ಣುವರ್ಧನ್ ರವರ ಅಳಿಯ ಕಿರುತೆರೆ ಹಾಗೂ ಚಲನಚಿತ್ರ ಹೆಸರಾಂತ ನಟ ಡಾ:ಅನಿರುದ್ಧ್ ನಟಿಸಿರುವ ಚಿದಂಬರ ಚಲನಚಿತ್ರಕ್ಕೆ ಚಾಲನೆ (ಪ್ರಮೋಷನ್) ನೀಡಲು ಮಂಗಳವಾರ (ನಾಳೆ) ಬೆಳಗ್ಗೆ 10:30ಕ್ಕೆ ನಟ ಅನಿರುದ್ಧ್ ಮತ್ತು ಶಾಸಕ ಹೆಚ್.ಟಿ ಮಂಜು ಅವರು ಕೆ.ಆರ್.ಪೇಟೆ ಪಟ್ಟಣದಲ್ಲಿರುವ ಬಸವೇಶ್ವರ ಚಿತ್ರಮಂದಿಕ್ಕೆ ಆಗಮಿಸಲಿದ್ದಾರೆ.ಹಾಗಾಗಿ ದಿ.ಡಾ: ವಿಷ್ಣುವರ್ಧನ್ ಅಭಿಮಾನಿಗಳು ಮತ್ತು ನಟ ಡಾ:ಅನಿರುದ್ಧ್ ಅಭಿಮಾನಿಗಳು ಸಾರ್ವಜನಿಕರು ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಹಾಗೂ ಆಗಮಿಸುವ ಗಣ್ಯರನ್ನ ಡಾ.ವಿಷ್ಣುವರ್ಧನ್ ಅಭಿಮಾನಿಗಳ ಸಂಘದ ಜಿಲ್ಲಾ ಅಧ್ಯಕ್ಷ ಪಾಂಡುಪುರ ಶ್ರೀಕಂಠ ,ಅಂಬರೀಷ್ ಅಭಿಮಾನಿಗಳ ಸಂಘದ ತಾಲ್ಲೂಕು ಅಧ್ಯಕ್ಷ ರೆಬಲ್ ಝುಬಿ, ಮೊಬೈಲ್ ಕೇಶವ, ಅಭಿ, ರಾಜು, ಅದ್ದೂರಿಯಾಗಿ ಸ್ವಾಗತಿಸಲಿದ್ದಾರೆ ಡಾ.ವಿಷ್ಣುವರ್ಧನ್ ಅಭಿಮಾನಿಗಳ ಸೇನಾ ಕೆ.ಆರ್.ಪೇಟೆ ತಾಲ್ಲೂಕು ಅಧ್ಯಕ್ಷ ವಿದ್ಯುತ್ ಚೇತನ್ ಪತ್ರಿಕಾ ಪ್ರಕಟಣೆಗೆ ತಿಳಿಸಿದರು.

# ಸಫಾರಿಗೆ ಆನ್‌ಲೈನ್ ಬುಕಿಂಗ್ ಮಾಡುವ ಮುನ್ನ ಎಚ್ಚರಿಕೆ

ಮೈಸೂರು: ಈಗ ಆನ್ ಲೈನ್ ಮೋಸ, ವಂಚನೆಗಳು ಹೆಚ್ಚಾಗುತ್ತಿದ್ದು, ಅಸಲಿ ನಕಲಿ ಯಾವುದು ಎಂಬುದನ್ನು ಪತ್ತೆ ಹಚ್ಚುವುದೇ ಕಷ್ಟವಾಗಿ ಪರಿಣಮಿಸಿದೆ. ಈ ನಡುವೆ ಆನ್ ಲೈನ್ ವಂಚಕರು ಯಾವ ಕ್ಷೇತ್ರವನ್ನೂ ಬಿಡದೆ ಆವರಿಸಿಕೊಳ್ಳುತ್ತಿರುವುದು ಆತಂಕಕಾರಿಯಾಗಿದೆ.

ವಂಚಕರ ಕಾಟ ಅರಣ್ಯ ಇಲಾಖೆಗೆ ತಟ್ಟಿದ್ದು, ನಾಗರಹೊಳೆ ನ್ಯಾಷನಲ್ ಪಾರ್ಕ್ ಹೆಸರಿನಲ್ಲಿ ನಕಲಿ ವೆಬ್ ಸೈಟ್ ತಯಾರಿಸಿ ಹಣ ದೋಚುತ್ತಿರುವುದು ಬೆಳಕಿಗೆ ಬಂದಿದೆ ಈಗಾಗಲೇ ಆನ್ ಲೈನ್ ನಲ್ಲಿ ಹಲವರು ಹಲವು ರೀತಿಯಲ್ಲಿ ವಂಚನೆ ಮಾಡಲಾಗಿತ್ತು. ಬುಕಿಂಗ್ ಮಾಡಿದ ಪ್ರವಾಸಿಗರು ಸಫಾರಿ ಕೇಂದ್ರಕ್ಕೆ ಬಂದಾಗ ನಕಲಿ ಬುಕಿಂಗ್ ವಂಚನೆ ಬೆಳಕಿಗೆ ಬಂದಿತ್ತು. ಅಲ್ಲದೆ ಈ ವಂಚಕರುಸಕ್ರಿಯರಾಗಿರುವುದು ಗಮನಕ್ಕೆ ಬಂದಿತ್ತು.

ವಿಷಯ ಗೊತ್ತಾಗುತ್ತಿದ್ದಂತೆಯೇ ಎಚ್ಚೆತ್ತುಕೊಂಡ ಅರಣ್ಯ ಇಲಾಖೆ ಕೊಡಗು ಜಿಲ್ಲಾ ಪೋಲೀಸ್ ಅಧಿಕಾರಿಯವರಿಗೆ ಜನವರಿ ತಿಂಗಳಿನಲ್ಲೇ ದೂರು ಸಲ್ಲಿಸಿ ಸೂಕ್ತ ಕ್ರಮಕ್ಕೆ ಕೋರಿತ್ತು. ಆಗ ನಕಲಿ ವೆಬ್ ಸೈಟ್ ಗಳು ಸ್ಥಗಿತಗೊಂಡಿದ್ದವು. ಇದೀಗ ಪ್ರವಾಸೋದ್ಯಮ ಚೇತರಿಸಿಕೊಳ್ಳುತ್ತಿದ್ದಂತೆಯೇ ಮತ್ತೆ ವಂಚಕರು ಬಾಲ ಬಿಚ್ಚಿದ್ದು, ನಕಲಿ ವೆಬ್




ಗೊಳಗಾಗಿದ್ದಾರೆ. ಆದರೆ ಅರಣ್ಯ ಇಲಾಖೆಗೆ ವಂಚಿಸಿ ಪ್ರವಾಸಿಗರ ಹಣ ದೋಚಿದ ಪ್ರಕರಣ ಬೆಳಕಿಗೆ ಬಂದಿದ್ದು, ಹೀಗೆ ಆದರೆ ಹೇಗಪ್ಪಾ? ಎಂದು ಜನತಲೆಚಚ್ಚಿಕೊಳ್ಳುವಂತಾಗಿದೆ. ಸದ್ಯ ಅರಣ್ಯ ಇಲಾಖೆ ಎಚ್ಚೆತ್ತುಕೊಂಡಿರುವುದರಿಂದ ಮುಂದೆ ಆಗಬಹುದಾಗ ವಂಚನೆಗೆ ಕಡಿವಾಣ ಬಿದ್ದಂತಾಗಿದೆ. ಇಷ್ಟಕ್ಕೂ ಆಗಿದ್ದೇನು ಎಂಬುದನ್ನು ನೋಡುತ್ತಾ ಹೋದರೆ ವಂಚಕರ ವಂಚನೆ ಬಯಲಾಗುತ್ತಾ ಹೋಗುತ್ತದೆ.

ಹಾಗೆನೋಡಿದರೆ ನಾಗರಹೊಳೆ ನ್ಯಾಷನಲ್ ಪಾರ್ಕ್ ಹೆಸರಿನಲ್ಲಿ ನಕಲಿ ವೆಬ್ ಸೈಟ್ ನ್ನು ಕಳೆದ ಜನವರಿಯಲ್ಲಿಯೇ ವಂಚಕರು ತೆರೆದಿದ್ದರಾದರೂ ಅದು ಬೆಳಕಿಗೆ ಬರಲು ಆರು ತಿಂಗಳೇ ಬೇಕಾಗಿದೆ. ಈ ಬಗ್ಗೆ ಅರಣ್ಯ ಇಲಾಖೆಗೆ ಮಾಹಿತಿಯೇ ಇರಲಿಲ್ಲ. ಇದೀಗ ಬೆಳಕಿಗೆ ಬರುತ್ತಿದ್ದಂತೆಯೇ ಅರಣ್ಯ ಇಲಾಖೆ ಎಚ್ಚೆತ್ತುಕೊಂಡಿದ್ದು, ಪ್ರವಾಸಿಗರು ಆನ್ ಲೈನ್ ನಲ್ಲಿ ಬುಕಿಂಗ್ ಮಾಡುವ ಮುನ್ನ ಇಲಾಖೆಯ ಅಧಿಕೃತ ವೆಬ್ ಸೈಟಾ ಎಂಬುದನ್ನು ಖಾತರಿ ಮಾಡಿಕೊಳ್ಳುವಂತೆ ಎಚ್ಚರಿಕೆ ನೀಡಿದೆ.

ಈಗಾಗಲೇ ನಾಗರಹೊಳೆಯ ಕಾಕನಕೋಟೆ, ವೀರನಗೊಸಳ್ಳಿ ಮತ್ತು ನಾಣಚ್ಚಿ ಕೇಂದ್ರಗಳ ಮೂಲಕ ಸಫಾರಿಗೆ ತೆರಳಲು ಪ್ರವಾಸಿಗರಿಗೆ ಆನ್ಲೈನ್ ಬುಕಿಂಗ್ ವ್ಯವಸ್ಥೆ ಇದೆ. ಈ ಹಿಂದೆ ಜನವರಿಯಲ್ಲಿ ನಕಲಿ ವೆಬ್ ಸೈಟ್ ಮೂಲಕ ಇಲ್ಲಿಗೆ ಬುಕಿಂಗ್ ಮಾಡಿಕೊಂಡು ಪ್ರವಾಸಿಗರಿಗೆ ಸಾವಿರಾರು ರೂಪಾಯಿ ವಂಚನೆ ಸೈಟ್ ಗಳು ಸಕ್ರಿಯವಾಗಿರುವುದು ಅರಣ್ಯ ಇಲಾಖೆ ಗಮನಕ್ಕೆ ಬಂದಿರುವುದಾಗಿ ನಾಗರಹೊಳೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಹರ್ಷ ಕುಮಾರ್ ಚಿಕ್ಕನರಗುಂದ ಮಾಹಿತಿ ನೀಡಿದ್ದಾರೆ.

ಈಗ ನಾಗರಹೊಳೆ ಮಾತ್ರವಲ್ಲದೆ, ಬಂಡೀಪುರ, ವೈನಾಡು, ಜಿಮ್ ಕಾರ್ಬೆಟ್ ನ್ಯಾಷನಲ್ ಪಾರ್ಕ್, ಕಾಜೀರಂಗ ಅಭಯಾರಣ್ಯ ಈ ರೀತಿ ದೇಶದ ಎಲ್ಲಾ ಅರಣ್ಯಗಳ ನಕಲಿ ವೆಬ್ ಸೈಟ್ ಮಾಡಿಕೊಂಡು ಪ್ರವಾಸಿಗರನ್ನು ವಂಚಿಸುವುದೇ ಅಲ್ಲದೆ ಅವರ ಪ್ರವಾಸ ಯೋಜನೆ, ಅಮೂಲ್ಯ ಸಮಯವನ್ನೂ ದುಷ್ಕರ್ಮಿಗಳು ಹಾಳು ಮಾಡುತಿದ್ದು, ಈ ಸಂಬಂಧ ಅರಣ್ಯ ಇಲಾಖೆ ಮತ್ತೆ ಪೋಲೀಸ್ ಇಲಾಖೆಗೆ ಪತ್ರ ಬರೆದು ವಂಚಕರ ವಿರುದ್ಧ ಕ್ರಮಕ್ಕೆ ಮನವಿ ಮಾಡಿರುವುದಾಗಿ ಅವರು ಹೇಳಿದ್ದಾರೆ.

ನಾಗರಹೊಳೆ ರಾಷ್ಟ್ರೀಯ ಉದ್ಯಾನವನದ ಚಿತ್ರ, ಆನೆ, ಹುಲಿ ಮತ್ತು ಇತರ ಪ್ರಾಣಿಗಳ ಚಿತ್ರ ಇರುವ ನಕಲಿ ವೆಬ್ ಸೈಟ್ ನಲ್ಲಿ ರಿಸರ್ವೇಶನ್ (ಕಾಯ್ದಿರಿಸುವಿಕೆ) ಮಾಡಿಕೊಳ್ಳಲಾಗುತ್ತಿತ್ತು. ರಿಸರ್ವೇಶನ್‌ಆಗಿರುವ ಕುರಿತು ಮೊಬೈಲ್‌ಗೆ ಸಂದೇಶ ಬರುವಂತೆಯೂ ವಂಚಕರು ಮಾಡಿಕೊಂಡಿದ್ದಾರೆ. ನಾಗರಹೊಳೆಯ ಅಧಿಕೃತ ವೆಬ್ ಸೈಟ್ ನಾಗರಹೊಳೆ ಟೈಗರ್ ರಿಸರ್ವ್ ಮಾತ್ರ ಆಗಿದ್ದು (https://www.nagaraholetigerreserve.com) ಇತರ ಯಾವುದೇ ವೆಬ್ ಸೈಟ್ ಗಳಲ್ಲಿ ರಿಸರ್ವೇಷನ್ ಮಾಡಿಸದಂತೆ ಹರ್ಷ ಕುಮಾರ್ ಪ್ರವಾಸಿಗರಿಗೆ ಗಮನಕ್ಕೆ ತಂದಿದ್ದಾರೆ.

# ಬ್ಯಾಂಕ್ ಆಫ್ ಬರೋಡ ಶಾಖೆಯಿಂದ ವರ್ಗಾವಣೆಯಾದ ಕೆ.ವಿ.ವಿನೋದ್ ಕುಮಾರ್‌ರವರಿಗೆ ಸನ್ಮಾನ

ಕೋಲಾರ : ವ್ಯಾಪಾರಸ್ಥರಿಗೆ ಮತ್ತು ವಾಣಿಜ್ಯ ವ್ಯವಹಾರಗಳಿಗೆ ಸ್ಪಂದಿಸಿ ಅವರ ಜೀವನಮಟ್ಟ ಸುಧಾರಿಸಲು ಕೆ ವಿ. ವಿನೋದ್ ಕುಮಾರ್ ಅನುಕೂಲ ಮಾಡಿರುತ್ತಾರೆ ಎಂದು ಶಿಕ್ಷಕ ಎನ್ ಎಂ ಮುನಿರಾಜು ರವರು ತಿಳಿಸಿದರು, ತಾಲೂಕಿನ ನರಸಾಪುರ ಗ್ರಾಮದ ಬ್ಯಾಂಕ್ ಆಫ್ ಬರೋಡ ಶಾಖಾ ವ್ಯವಸ್ಥಾಪಕರಾದ ಕೆ ವಿನೋದ್ ಕುಮಾರ್ ನರಸಾಪುರ ಶಾಖೆಯಿಂದ ಬೇರೆ ಶಾಖೆಗೆ ವರ್ಗಾವಣೆಗೊಂಡಿದ್ದು ಅವರಿಗೆ ಎಂಟಿಬಿ ರಮೇಶ್ ರವರ ನೇತೃತ್ವದಲ್ಲಿ ಏರ್ಪಡಿಸಿದ್ದ ಸನ್ಮಾನ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿ ಇವರ ಅವಧಿಯಲ್ಲಿ ಗ್ರಾಹಕರಿಗೆ ಉತ್ತಮ ಸೇವೆ ಸಲ್ಲಿಸಿ ವಿದ್ಯಾರ್ಥಿಗಳಿಗೆ, ಮತ್ತು ವ್ಯಾಪಾರಸ್ಥರಿಗೆ ಸಾಲಗಳನ್ನು ನೀಡಿ ಅವರ ಅವರ ಕಷ್ಟಕ್ಕೆ ಸ್ಪಂದಿಸಿ, ಅವರ ಆರ್ಥಿಕ ಜೀವನ ಮಟ್ಟ



ಸುಧಾರಿಸಲು ಅನುಕೂಲ ಮಾಡಿರುತ್ತಾರೆ ಎಂದರು, ನಂತರ ಎಂಟಿಬಿ ಗ್ರೂಪ್ಸ್ ನ ಎಂಟಿಬಿ ರಮೇಶ್ ಮಾತನಾಡಿ ಇವರ ಅವಧಿಯಲ್ಲಿ ಕೆಲವೊಂದು ಶಾಲೆಗಳ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿ ಊಟ ಮಾಡುವ ತಟ್ಟೆಗಳನ್ನು ಮತ್ತು ಲೋಟಗಳನ್ನು ಸಹ ನೀಡಿದ್ದು, ವಿದ್ಯಾರ್ಥಿಗಳ ಸೇವೆಗಾಗಿ ಕೆಲವೊಂದು ಕಾರ್ಯಕ್ರಮಗಳನ್ನು ಕೈಗೊಂಡಿದ್ದರು ಎಂದರು, ಈ ಕಾರ್ಯಕ್ರಮದಲ್ಲಿ ಅಸಿಸ್ಟೆಂಟ್ ಮ್ಯಾನೇಜರ್ ಶಬೀನಾ, ಗ್ರಾಮಸ್ಥರಾದ ಚಂದ್ರಶೇಖರಯ್ಯ, ಜೈ ದೇವ್, ಓಂ ಪ್ರಕಾಶ್, ಶ್ರೀನಿವಾಸ ದೀಕ್ಷಿತ್, ಆರ್ ಮಂಜುನಾಥ್, ಎನ್ ಲೋಕೇಶ್, ಬ್ಯಾಂಕ್ ಸಿಬ್ಬಂದಿಗಳಾದ ನೀತು, ರವಿ, ಗೋವಿಂದು, ಕಾರ್ತಿಕ್, ಮಂಜು, ಹಾಜರಿದ್ದರು.

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH